ಸಂಪುಟ : ೯ ಸಂಚಿಕೆ 171 ಪುಟ : 4 ಬೆಲೆ: 3.00 ಮಂಗಳವಾರ ಆಗಸ್ಟ್ 13 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 171 Pages : 4 Price : 3.00 Tuesday August 13 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಸಚಿವ ಡಾ.ಎಚ್.ಕೆ. ಪಾಟೀಲ ಜಿಲ್ಲಾ ಪ್ರವಾಸ ಇಂದಿನಿಂದ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಆಗಸ್ಟ್ 13, 14 ಮತ್ತು15 ರ ಗದಗ ಜಿಲ್ಲಾ ಪ್ರವಾಸದ ವಿವರ ಇಂತಿದೆ.

ಆಗಸ್ಟ್ 13 ಮಂಗಳವಾರ ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ವಿಶ್ವ ಅಂಗಾಗ ದಾನ ದಿನಾಚರಣೆ ಅಂಗವಾಗಿ ಸೈಕಲ್ ಜಾಥಾ ಹಾಗೂ ಕಾಲ್ನಡಿಗೆ (ವಾಕಥಾನ್) ಗೆ ನಿಶಾನೆ ತೋರುವ ಮೂಲಕ ಚಾಲನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಂಜೆ 5 ಗಂಟೆಯಿಂದ 7ರ ವರೆಗೆ ಶಾಸಕರ ಕಚೇರಿ, ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಸಾರ್ವಜನಿಕರ ಭೇಟಿ, ನಂತರ ಗದಗನಲ್ಲಿ ವಾಸ್ತವ್ಯ ಮಾಡುವರು.

ಆಗಸ್ಟ್ 14 ಬುಧವಾರ ಬೆಳಿಗ್ಗೆ 11 ಗಂಟೆಗೆ ಮುಳಗುಂದ ಗ್ರಾಮದ ಅಂಬಾಭವಾನಿ ದೇವಿಯ ನೂತನ ಮೂರ್ತಿ ಪ್ರತಿಷ್ಠಾಪನೆ, ಕಳಸಾರೋಹಣ, ಸಿಂಹ ಪ್ರತಿಷ್ಠಾಪನೆ, ಪಾದ ಪ್ರತಿಷ್ಠಾಪನೆ ಮತ್ತು ನೂತನ ಕಾರ್ಯಾಲಯ ಕಟ್ಟಡದ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮದ್ಯಾಹ್ನ 12.30 ಗಂಟೆಗೆ ಗದಗದಲ್ಲಿ ಎಸ್.ಟಿ.ಪಾಟೀಲ್ ಅವರ ನೂತನ ಗೃಹ ಪ್ರವೇಶ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗದಗನಲ್ಲಿ ವಾಸ್ತವ್ಯ ಮಾಡುವರು.

ಆಗಸ್ಟ್ 15 ಗುರುವಾರ ಬೆಳಿಗ್ಗೆ 8 ಗಂಟೆಗೆ ಕೋ-ಆಪ್ ಇಂಡಸ್ಟ್ರೀಯಲ್ ಎಸ್ಟೇಟ್ ನಲ್ಲಿ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಬೆಳಿಗ್ಗೆ 8.30 ಗಂಟೆಗೆ ಕಾಟನ್ ಸೇಲ್ ಸೊಸೈಟಿ ಆವರಣದ ಕಾಂಗ್ರೆಸ್ ಕಚೇರಿಯಲ್ಲಿ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವುರು. ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಧ್ವಜಾರೋಹಣ ಹಾಗೂ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಸಂಜೆ 6 ಗಂಟೆಗೆ ನಗರದ ಪಂಡಿತ ಭೀಮಸೇನ್ ಜೋಶಿ ರಂಗಮಂದಿರದಲ್ಲಿ ಗದಗ ಜಿಲ್ಲಾ ಪೊಲೀಸ್ ವತಿಯಿಂದ ಏರ್ಪಡಿಸಲಾದ ಪೊಲೀಸ್ ಅಧಿಕಾರಿ ಸಿಬ್ಬಂದಿ ಮತ್ತು ಕುಟುಂಬದವರಿಗೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಗದಗನಲ್ಲಿ ವಾಸ್ತವ್ಯ ಮಾಡುವರು.

ಆಗಸ್ಟ್ 16 ಶುಕ್ರವಾರ ಮಧ್ಯಾಹ್ನ 12 ಗಂಟೆಗೆ ಬ್ಯಾಲವಾಡಗಿ ಕ್ರಾಸ್, ಮುಂಡರಗಿಯಲ್ಲಿ ಚೋಟು ಮಹಾರಾಜ್ ಚಿತ್ರಮಂದಿರ ಉದ್ಘಾಟನೆ ಕಾರ್ಯಕ್ರದಲ್ಲಿ ಭಾಗವಹಿಸುವರು ಎಂದು ಸಚಿವರ ಕಾರ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ.



ಹರಪನಹಳ್ಳಿ ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ್ ಅವರ ಜನ್ಮದಿನದ ನಿಮಿತ್ತ ಶ್ರೀದೇವಿ ಮಹಿಳಾ ವಿವಿಧೋದ್ದೇಶ ಸಂಘ ಮತ್ತು ಎಂ.ಪಿ. ಲತಾ ಮಲ್ಲಿಕಾರ್ಜುನ ಅಭಿಮಾನಿ ಬಳಗದಿಂದ ತಾಲೂಕಿನ ನಿಚ್ಚಾಪುರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಗೆ ಉಚಿತ ಕಲಿಕಾ ಸಾಮಾಗ್ರಿ ವಿತರಿಸಿದರು. ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಪಿ.ಜಯಲಕ್ಷ್ಮೀ, ಉಮಾಶಂಕರ, ಸಿದ್ದಲಿಂಗಸ್ವಾಮಿ, ಇಸ್ಮಾಯಿಲ್ ಎಲಿಗಾರ್, ಪಾಪಣ್ಣ, ಮುಖ್ಯಶಿಕ್ಷಕಿ ರತ್ನಮ್ಮ ಮುಂತಾದವರಿದ್ದರು.

### ಸ್ವಾತಂತ್ರ್ಯೋತ್ಸವ ದಿನಾಚರಣೆಯ ಪೂರ್ವಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ

## ಕಾರ್ಯಕ್ರಮಗಳು ಅಚ್ಚುಕಟ್ಟಾಗಿ ನೆರವೇರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಆಗಸ್ಟ್ 15ರಂದು ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮಕ್ಕೆ ಯಾವುದೇ ಲೋಪದೋಷಗಳಿಲ್ಲದಂತೆ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಸ್ವಾತಂತ್ರ್ಯೋತ್ಸವ ದಿನಾಚರಣೆಯ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯೋತ್ಸವದ ಮುನ್ನಾ ದಿವಸ ಆ. 14 ಹಾಗೂ ಸ್ವಾಂತಂತ್ರ್ಯೋತ್ಸವ ದಿನದಂದು ನಗರದ ಪ್ರಮುಖ ವೃತ್ತಗಳಲ್ಲಿ ಹಾಗೂ ಸರ್ಕಾರಿ ಕಚೇರಿ ಕಟ್ಟಡಗಳ ಮೇಲೆ ದೀಪಾಲಂಕಾರದ ವ್ಯವಸ್ಥೆಗೆ ಕ್ರಮ ವಹಿಸಬೇಕು. ಆ. 15ರಂದು ಬೆಳಿಗ್ಗೆ 7.30ಕ್ಕೆ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಧಿಕಾರಿಗಳಿಂದ ರಾಷ್ಟ್ರ ಧ್ವಜಾರೋಹಣ ಜರುಗುವುದು. ಶಾಲಾ ಮಕ್ಕಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ನಗರದ ಜಿಲ್ಲಾ ಕ್ರೀಡಾಂಗಣಕ್ಕೆ ಧ್ವಜಾರೋಹಣ ಕಾರ್ಯಕ್ರಮಕ್ಕೆ ಯಾವುದೇ ಗೊಂದಲಗಳಾಗದಂತೆ ಮುಂಚಿತವಾಗಿಯೇ ಹಾಜರಿರಬೇಕಾಗುತ್ತದೆ. ಕಾರ್ಯಕ್ರಮದ ಸ್ಥಳದ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಎಲ್ಲ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ತಪ್ಪದೇ ಸಮಯಕ್ಕೆ ಸರಿಯಾಗಿ ಹಾಜರಾಗಬೇಕು.



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಆ. 15ರಂದು ಸಂಜೆ ನಗರದ ಭೀಮಸೇನ ಜೋಶಿ ರಂಗಮಂದಿರದಲ್ಲಿ ಪೊಲೀಸ್ ಇಲಾಖೆಯಿಂದ ಸಂಗೀತ ಸಂಜೆ ಕಾರ್ಯಕ್ರಮ ಜರುಗಲಿದೆ. ಎಲ್ಲ ಇಲಾಖೆಯ ಅಧಿಕಾರಿಗಳು ಆಗಮಿಸಿ ಸಂಗೀತ ಸಂಜೆ ಕಾರ್ಯಕ್ರಮ ವೀಕ್ಷಿಸಬೇಕೆಂದು ತಿಳಿಸಿದರು.

ಇಲ್ಲದಿದ್ದಲ್ಲಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು.

ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಷ್ಟ್ರ ಧ್ವಜಾರೋಹಣವು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನೆರವೇರಲಿದ್ದು, ಎಲ್ಲಾ ಕಾರ್ಯಕ್ರಮಗಳು ಅಚ್ಚುಕಟ್ಟಾಗಿ ನಡೆಯಬೇಕು. ಕಾರ್ಯಕ್ರಮಕ್ಕೆ ಆಗಮಿಸುವಾಗ ಹಾಗೂ ಕಾರ್ಯಕ್ರಮದ ನಂತರ ಮರಳಿ ಹೋಗುವಾಗ ಸಾರ್ವಜನಿಕರಿಗೆ ಯಾವುದೇ ರೀತಿಯ ಗೊಂದಲಗಳಾಗದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ರವಿ ಗುಂಜೀಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ಶರಣು ಗೋಗೇರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಎಸ್. ಬಾರಾಟಕ್ಕೆ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಗಂಗಪ್ಪ ಕುರ್ತಕೋಟಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

**ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮಗಳು**

ಆಗಸ್ಟ್ 15ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಧ್ವಜಾರೋಹಣ ಕಾರ್ಯಕ್ರಮವನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ನೆರವೇರಿಸುವರು. ನಂತರ ರಾಷ್ಟ್ರಗೀತೆ, ನಾಡಗೀತೆ, ಪರೇಡ್ ವೀಕ್ಷಣೆ, ಪಥ ಸಂಚಲನ ಮತ್ತು ವಂದನೆ ಸ್ವೀಕಾರ, ಸ್ವಾತಂತ್ರ್ಯೋತ್ಸವದ ಸಂದೇಶ, ಸಾಧಕರಿಗೆ ಸನ್ಮಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

### ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ

## ಶಾಲಾಭಿವೃದ್ಧಿ ಕಾಮಗಾರಿಗಳಿಗೆ ಒತ್ತು ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ನರೇಗಾ ಯೋಜನೆಯಡಿ ಸರ್ಕಾರಿ ಶಾಲೆಯ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಏರ್ಪಡಿಸಲಾಗಿದ್ದ ಇಲಾಖೆಯ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾಮಾಜಿಕ ಲೆಕ್ಕ ಪರಿಶೋಧನೆ ಆಕ್ಷೇಪಣೆ, ವಸೂಲಾತಿ, ಒಂಬುಡ್ಸಮನ್ ವಸೂಲಾತಿ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಸರಿಯಾಗಿ ಕ್ರಮವಹಿಸಬೇಕು ಮತ್ತು ಗ್ರಾಮ ಆರೋಗ್ಯ ಶಿಬಿರದ ಮಾಹಿತಿಯನ್ನು ಪಂಚತಂತ್ರ-2ನಲ್ಲಿ ಕಡ್ಡಾಯವಾಗಿ ಆರೋಹಿಸಲು ಹಾಗೂ ಪ್ರತಿ ಮಾಹೆ ಗ್ರಾಮ ಪಂಚಾಯಿತಿ ಟಾಸ್ಕ್ ಫೋರ್ಸ್ ಸಭೆ ಆಯೋಜನೆ ನಡೆಸುವಂತೆ ಭರತ್ ಎಸ್ ಅಧಿಕಾರಿಗಳಿಗೆ ಸೂಚಿಸಿದರು.



ನರೇಗಾ ಯೋಜನೆಯಡಿ ಆದ್ಯತೆಯನುಸಾರ ಸರ್ಕಾರಿ ಶಾಲಾಭಿವೃದ್ಧಿ ಕಾಮಗಾರಿಗಳಾದ ಶಾಲಾ ಶೌಚಾಲಯ, ಶಾಲಾ ಕಾಂಪೌಂಡ್, ಶಾಲಾ ಅಡುಗೆ ಕೋಣೆ ಹಾಗೂ ಶಾಲಾ ಆಟದ ಮೈದಾನಂತಹ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಹರಡುತ್ತಿರುವ ಡೆಂಗ್ಯೂ ರೋಗವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಎಲ್ಲ ಗ್ರಾಮಗಳಲ್ಲಿ ಶುಚಿತ್ವಕ್ಕೆ ಒತ್ತು ನೀಡುವುದು ಹಾಗೂ ಗ್ರಾಮ ಮಟ್ಟದಲ್ಲಿ ಕೈಗೊಳ್ಳಬೇಕಿರುವ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹೇಳಿದರು.

> ಸಕಾಲದಡಿ ಸ್ವೀಕೃತವಾದ ಎಲ್ಲಾ ಅರ್ಜಿಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲು ಕ್ರಮವಹಿಸಬೇಕು ಹಾಗೂ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವರ್ಗದ ಅಧಿಕಾರಿಗಳ ಹಾಜರಾತಿಯನುಸಾರ ವೇತನ ಪಾವತಿಗೆ ಮುಂದಾಗಬೇಕಿದ್ದು, ಕಡ್ಡಾಯವಾಗಿ ಕಛೇರಿಗೆ ತೆರಳಿ ಸಾರ್ವಜನಿಕರಿಗೆ ಲಭ್ಯವಿರುವಂತೆ ಕಾರ್ಯನಿರ್ವಹಿಸಬೇಕು.
>
> – ಭರತ್ ಎಸ್.
> ಜಿ.ಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ

ಜಿಲ್ಲೆಯಲ್ಲಿ ತೆರಿಗೆ ಸಂಗ್ರಹಣೆ ಕಡಿಮೆಯಾಗದಂತೆ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ಸರ್ಕಾರದ ನಿರ್ದೇಶನದಂತೆ ಸ್ವ-ಸಹಾಯ ಸಂಘದ ಸದಸ್ಯರಿಂದ ವಸೂಲು ಮಾಡಿಸುವ ಬಗ್ಗೆ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಬೇಕು.

▸▸ 3ನೇ ಪುಟಕ್ಕೆ

### ಪಟ್ಟಣದ ಪ್ರಮುಖ ರಸ್ತೆ, ವೃತ್ತಗಳ ಬೀದಿಬದಿಯಲ್ಲಿ ವ್ಯಾಪಾರಕ್ಕೆ ಪುರಸಭೆ ನಿರ್ಬಂಧ

## ತೆರವು ಕಾರ್ಯಾಚರಣೆ ಯಶಸ್ವಿ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸುಗಮ ಸಂಚಾರದ ಉದ್ದೇಶದಿಂದ ಪಟ್ಟಣದ ಜೋಡು ರಸ್ತೆ, ದುರ್ಗಾವೃತ್ತ ಹಾಗೂ ಕೆ.ಕೆ. ವೃತ್ತ ಸೇರಿ ವಿವಿಧ ರಸ್ತೆಗಳ ಬದಿಯಲ್ಲಿ ಹೂ, ಹಣ್ಣು, ತರಕಾರಿ ವ್ಯಾಪಾರ ಮಾಡುತ್ತಿದ್ದ ಬೀದಿ ಬದಿ ವ್ಯಾಪಾರಸ್ಥರಿಗೆ ಪುರಸಭೆ ನಿರ್ಬಂಧ ಹೇರಿದ ಪರಿಣಾಮ ಅಧಿಕಾರಿಗಳು ಪ್ರಮುಖ ರಸ್ತೆ ಹಾಗೂ ವೃತ್ತಗಳಲ್ಲಿನ ಬೀದಿ ಬದಿ ವ್ಯಾಪಾರಕ್ಕೆ ಕಡಿವಾಣ ಹಾಕಿದ ಘಟನೆ ಸೋಮವಾರ ನಡೆದಿದೆ.

ಪಟ್ಟಣದ ಪ್ರಮುಖ ರಸ್ತೆ ಹಾಗೂ ವೃತ್ತಗಳ ಇಕ್ಕೆಲಗಳಲ್ಲಿ ನೂರಾರು ಬೀದಿ ಬದಿ ವ್ಯಾಪಾರಸ್ಥರು ಅವೈಜ್ಞಾನಿಕ ಮಾದರಿಯಲ್ಲಿ ವ್ಯಾಪಾರ-ವಹಿವಾಟು ನಡೆಸುತ್ತಿದ್ದ ಪರಿಣಾಮ ಸುಗಮ ಸಂಚಾರಕ್ಕೆ ಅಡಚಣೆ ಆಗುತ್ತದೆ ಎಂಬ ದೂರಗಳು ಕೇಳಿ ಬಂದಿದ್ದವು. ಹೀಗಾಗಿ ಸ್ಥಳೀಯ ಪುರಸಭೆಯಿಂದ ನಿಗದಿತ ರಸ್ತೆ ಹಾಗೂ ವೃತ್ತಗಳಲ್ಲಿ ವ್ಯಾಪಾರಕ್ಕೆ ನಿರ್ಬಂಧ ಹೇರಿದ ಪರಿಣಾಮ ಸ್ಥಳೀಯ ಬೀದಿ ಬದಿ ವ್ಯಾಪಾರಸ್ಥರು ರೋಣ ರಸ್ತೆಯ ಎಪಿಎಂಸಿ ಹತ್ತಿರ ಬಯಲು ಜಾಗೆಯಲ್ಲಿ ತಾತ್ಕಾಲಿಕ ವ್ಯಾಪಾರ ವಹಿವಾಟಿಗೆ ಮುಂದಾಗಿದ್ದಾರೆ.

> ಹಲವು ವರ್ಷಗಳಿಂದ ಬೀದಿಬದಿಯಲ್ಲಿ ಹಣ್ಣು ಮತ್ತು ಹೂ, ತರಕಾರಿ ಸೇರಿ ಅಗತ್ಯ ಸಾಮಾಗ್ರಿಗಳ ಮಾರಾಟದೊಂದಿಗೆ ಜೀವನ ಸಾಗಿಸುತ್ತಿದ್ದೇವೆ. ಈಗ ರಸ್ತೆ ಬದಿಯಲ್ಲಿ ವ್ಯಾಪಾರ ವಹಿವಾಟಿಗೆ ನಿರ್ಬಂಧ ಹೇರಿದರೆ, ನಮ್ಮ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಲಿವೆ. ಹೀಗಾಗಿ ಪಟ್ಟಣದ ಬೀದಿ ಬದಿಯಲ್ಲಿ ವ್ಯಾಪಾರಕ್ಕೆ ಅವಕಾಶಕೊಡಬೇಕು ಎಂಬುದು ಬೀದಿಬದಿ ವ್ಯಾಪಾರಿಗಳು ತಮ್ಮ ಅಳಲು ತೋಡಿಕೊಂಡರು.

ಪಟ್ಟಣದ ಕಾಲಕಾಲೇಶ್ವರ ವೃತ್ತದ ಸುತ್ತಲಿನ ಪ್ರದೇಶದಲ್ಲಿನ ಬೀದಿ ಬದಿ ವ್ಯಾಪಾರಸ್ಥರನ್ನು ಈ ಹಿಂದೆ ತಾಲೂಕಾಡಳಿತದ ಆದೇಶದ ಹಿನ್ನಲೆಯಲ್ಲಿ ಪುರಸಭೆ ಹಾಗೂ ಪೊಲೀಸ್ ಇಲಾಖೆ ಜಂಟಿಯಾಗಿ ತಹಸೀಲ್ದಾರ್ ಕಚೇರಿ ಎದುರು ಹಾಗೂ ರೋಣ ರಸ್ತೆಯಲ್ಲಿನ ಬೀದಿ ಬದಿ ವ್ಯಾಪಾರಸ್ಥರನ್ನು ಒಕ್ಕಲೆಬ್ಬಿಸಿದ್ದರು.

ಅಧಿಕಾರಿಗಳ ಈ ವರ್ತನೆ ಖಂಡಿಸಿ ಪ್ರತಿಭಟನೆಯೂ ಜೋರಾಗಿ ನಡೆದಿತ್ತು.

ಆದರೆ ದಿನ ಕಳೆದಂತೆ ತಹಸೀಲ್ದಾರ್ ಕಚೇರಿ ಸುತ್ತಲೂ ವ್ಯಾಪಾರ, ವಹಿವಾಟು ಎಂದಿನಂತೆ ಮತ್ತೆ ಆರಂಭವಾಗಿದ್ದ ಪರಿಣಾಮ ಪಟ್ಟಣದಲ್ಲಿ ಸುಗಮ ಸಂಚಾರಕ್ಕೆ ತೊಂದರೆ ಉಂಟಾಗಿತ್ತು.

ಪಟ್ಟಣದ ಜೋಡು ರಸ್ತೆ, ದುರ್ಗಾ ವೃತ್ತ, ಅಂಬೇಡ್ಕರ ವೃತ್ತ ಸೇರಿ ರೋಣ, ಕುಷ್ಟಗಿ ಹಾಗೂ ಬಸ್ ನಿಲ್ದಾಣ ರಸ್ತೆಯಲ್ಲಿನ ಬೀದಿ ಬದಿ ವ್ಯಾಪಾರಸ್ಥರನ್ನು ಸ್ಥಳಾಂತರ ಮಾಡುವುದು ಎಂದರೆ ಜೇನುಗೂಡಿಗೆ ಕಲ್ಲೆಸೆದಂತೆ ಎಂದು ಅರ್ಥ ಮಾಡಿಕೊಂಡಿದ್ದ ಅಧಿಕಾರಿಗಳು ಮುಂಜಾಗ್ರತೆಯಾಗಿ ಬಿಗಿ ಪೊಲೀಸ್ ಭದ್ರತೆಯಲ್ಲಿ ತೆರವು ಕಾರ್ಯಾಚರಣೆಗೆ ಮುಂದಾಗಿದ್ದರು.

ಆದರೆ ಕೆಲವೆಡೆ ಅಧಿಕಾರಿಗಳು ಮತ್ತು ವ್ಯಾಪಾರಸ್ಥರ ನಡುವೆ ವಾಗ್ವಾದಗಳು ನಡೆದಾಗ ಮೇಲಧಿಕಾರಿಗಳ ಆದೇಶದ ಮೇರೆಗೆ ಕೆಲಸ ನಿರ್ವಹಿಸುತ್ತಿದ್ದೇವೆ ಸಹಕರಿಸಬೇಕು ಎಂದು ಅಧಿಕಾರಿಗಳು ತೆರವು ಕಾರ್ಯಾಚರಣೆಯನ್ನು ಯಶ್ವಸಿಗೊಳಿಸಿದರು.

### ತುಂಗಭದ್ರಾ ಜಲಾಶಯಕ್ಕೆ ಸಮಾನಾಂತರ ಜಲಾಶಯ ನಿರ್ಮಾಣವಾಗಲಿ: ಬಸವರಾಜ ಬೊಮ್ಮಾಯಿ

## ಡ್ಯಾಮ್‌ಗಳ ಸುರಕ್ಷತೆಯ ಪರಿಶೀಲನೆಯಾಗಲಿ



■ ವಿಜಯಸಾಕ್ಷಿ ಸುದ್ದಿ, ವಿಜಯನಗರ

ತುಂಗಭದ್ರಾ ಡ್ಯಾಮ್‌ನ ಕ್ರಸ್ಟ್ ಗೇಟ್‌ನ ಚೈನ್ ಕತ್ತರಿಸಿ ನೀರು ಹರಿದು ಪೋಲಾಗಿರುವುದರಿಂದ ರಾಜ್ಯ ಸರ್ಕಾರ ತಂಗಭದ್ರಾ ಜಲಾಶಯಕ್ಕೆ ಸಮಾನಾಂತರ ಜಲಾಶಯ ನಿರ್ಮಾಣ ಮಾಡಲು ಚಾಲನೆ ಕೊಡಲು ಇದು ಸೂಕ್ತ ಸಮಯ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟಿದ್ದಾರೆ.

ಅವರು ಸೋಮವಾರ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಅವರೊಂದಿಗೆ ಮುನಿರಾಬಾದ್ ಬಳಿ ಇರುವ ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಈ ಬಗ್ಗೆ ಈಗಾಗಲೇ ಡಿಪಿಆರ್ ಸಿದ್ಧವಾಗಿದೆ. ಮುಖ್ಯಮಂತ್ರಿಗಳು ಈಗಿನ ಆಂಧ್ರಪ್ರದೇಶ ಹಾಗೂ ತೆಲಂಗಾಣ ಸರ್ಕಾರದೊಂದಿಗೆ ಮಾತುಕತೆ ನಡೆಸಿ ಸಮಾನಾಂತರ ಜಲಾಶಯ ನಿರ್ಮಾಣಕ್ಕೆ ಮುಂದಾಗಬೇಕು. ಇದರಿಂದ 28 ಟಿಎಂಸಿ ನೀರು ಉಳಿತಾಯವಾಗಲಿದೆ.

ತುಂಗಭದ್ರಾ ಕಲ್ಯಾಣ ಕರ್ನಾಟಕದ ಜಿವನಾಡಿ, ನಮ್ಮ ಕರ್ನಾಟಕದ ಒಟ್ಟು ಕೃಷಿ ಆದಾಯದಲ್ಲಿ ಶೇ 40ಕ್ಕಿಂತ ಹೆಚ್ಚು ಆದಾಯ ತುಂಗಭದ್ರಾ ಡ್ಯಾಮ್ ಪ್ರದೇಶದಿಂದ ಬರುತ್ತದೆ. ಮೂರು ರಾಜ್ಯಗಳು ಇದರ ಪಾಲು ಪಡೆಯುತ್ತವೆ.

ನೀರಿನ ನಿರ್ವಹಣೆಯನ್ನು ಸರಿಯಾಗಿ ಮಾಡದಿರುವ ಬಗ್ಗೆ ಸೂಕ್ತ ತನಿಖೆಯಾಗಬೇಕು. ಡ್ಯಾಂ ಸುರಕ್ಷತಾ ನಿರ್ವಹಣಾ ಸಮಿತಿ ನೀಡಿರುವ ಸಲಹೆಗಳನ್ನು ಸರಿಯಾಗಿ ಪಾಲಿಸಿಲ್ಲ. ಡ್ಯಾಮ್‌ಗಳ ನಿರ್ವಹಣೆಗೆ ವಿಶ್ವ ಬ್ಯಾಂಕ್ ಹಣ ಕೊಡುತ್ತದೆ.

ಆ ಹಣವನ್ನು ಸಂಪೂರ್ಣ ಬಳಕೆ ಮಾಡಿ, ಎಲ್ಲ ಗೇಟ್‌ಗಳನ್ನು ಪರಿಶೀಲನೆ ಮಾಡಿ ಯಾವುದು ಬದಲಾವಣೆ ಮಾಡಬೇಕೋ ಅದನ್ನು ಬದಲಾಯಿಸಬೇಕು. ರಾಜ್ಯದ ಬಹುತೇಕ ಆಣೆಕಟ್ಟೆಗಳು ಐವತ್ತು ವರ್ಷ ಪೂರೈಸಿವೆ. ಸ್ಟಾಪ್ ಪ್ಲಗ್ ಗೇಟ್‌ಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಬೇಕು.

ಅಲ್ಲದೇ ಡ್ಯಾಮ್‌ಗಳ ಸುರಕ್ಷತೆಯ ಒಂದು ವಿಶೇಷ ತಜ್ಞರ ತಂಡ ರಚನೆ ಮಾಡಿ, ಕೇಂದ್ರದ ಮಾದರಿಯಲ್ಲಿ ಈ ತಂಡ ಡ್ಯಾಮ್‌ಗಳ ಸುರಕ್ಷತೆಯ ಬಗ್ಗೆ ಮಾಹಿತಿ ನೀಡುವ ಕೆಲಸ ಮಾಡಬೇಕು. ಈ ಕೆಲಸವನು ಎಲ್ಲರೂ ಸೇರಿ ಮಾಡೋಣ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಹಾಜರಿದ್ದರು.

**ರೈತರಿಗೆ ಪರಿಹಾರ ಕೊಡಿ**

ಡಿಸಿಎಂ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ಅವರು ಈ ಘಟನೆಗೆ ಯಾರೂ ಹೊಣೆಯಲ್ಲ ಎಂದು ಹೇಳಿರುವುದನ್ನು ನಾನು ಒಪ್ಪುವುದಿಲ್ಲ.

ಇದರಲ್ಲಿ ಲೋಪ ಇದೆ. ಈ ಬಗ್ಗೆ ತನಿಖೆಯಾಗಲಿ. ಆಗ ಮಾತ್ರ ಸರ್ಕಾರದ ಮೇಲೆ ನಂಬಿಕೆ ಬರುತ್ತದೆ. ನಮಗೆ 115 ಟಿಎಂಸಿ ನೀರು ಬೇಕು. ಈಗಾಗಲೇ 20 ಟಿಎಂಸಿ ನೀರು ಹರಿದು ಹೋಗಿದೆ. ಇನ್ನೂ ಮಳೆಯಿಂದ ಸುಮಾರು 40 ಟಿಎಂಸಿ ನೀರು ಬರುವ ನಿರೀಕ್ಷೆ ಇದೆ.

ಆದರೆ ಅದು ಪ್ರಕೃತಿಯ ಮೇಲೆ ನಿರ್ಧಾರ ಆಗುತ್ತದೆ. ಈಗಿರುವ ಪರಿಸ್ಥಿತಿಯಲ್ಲಿ ಎರಡನೇ ಬೆಳೆ ಬೆಳೆಯುವುದು ಕಷ್ಟವಾಗಲಿದ್ದು, ರಾಜ್ಯ ಸರ್ಕಾರ ಕೂಡಲೇ ರೈತರಿಗೆ ಪ್ರತಿ ಹೆಕ್ಟೇರ್‌ಗೆ 50 ಸಾವಿರ ರೂ. ಪರಿಹಾರ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಬಸವರಾಜ ಬೊಮ್ಮಾಯಿ ಆಗ್ರಹಿಸಿದರು.

## ಸಂಪಾದಕೀಯ

# ಸರ್ಕಾರಕ್ಕೆ ಎಚ್ಚರಿಕೆ ಗಂಟೆ

ತುಂಗಭದ್ರಾ ಅಣೆಕಟ್ಟೆಯ 19ನೇ ಕ್ರಸ್ಟ್ ಗೇಟ್ ಕೊಚ್ಚಿ ಹೋಗಿದ್ದು ಅಪಾರ ಪ್ರಮಾಣದ ನೀರು ನದಿಗೆ ಹರಿಯುತ್ತಿದೆ. ಕ್ರಸ್ಟ್ ಗೇಟ್ ದುರಸ್ತಿಗೆ ಅಂದಾಜು 60 ಟಿಎಂಸಿ ನೀರು ಖಾಲಿ ಮಾಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ. ಅಂದರೆ ಅಣೆಕಟ್ಟೆಯ ಶೇಕಡಾ ಅರ್ಧಕ್ಕೂ ಹೆಚ್ಚಿನ ಭಾಗ ಖಾಲಿಯಾಗಲೇಬೇಕು.

ಕೇವಲ ಒಂದು ಸಣ್ಣ ಗೇಟ್ ತುಂಗಭದ್ರಾ ನದಿ ತೀರದ ವ್ಯಾಪ್ತಿಯನ್ನ ಬರಡಾಗಿಸುವಂತಹ ಆತಂಕ ತಂದೊಡ್ಡಿದೆ. ಸದ್ಯಕ್ಕೆ ಮಳೆಯೂ ಕಡಿಮೆಯಾಗಿದೆ. ನೀರಿನ ಒಳಹರಿವು ಕಡಿಮೆಯಾಗಿದೆ. ನೀರು ಶೇಖರಣೆ ಮಾಡಬೇಕಾದಂತಹ ಸಂದರ್ಭದಲ್ಲಿ ಪೋಲು ಮಾಡಬೇಕಾದಂತಹ ಸಂದರ್ಭ ಒದಗಿ ಬಂದಿದೆ.

ತುಂಗಭದ್ರಾ ಅಣೆಕಟ್ಟೆಯ ಈ ಘಟನೆ ಆಡಳಿತಕ್ಕೆ ಒಂದು ಪಾಠವಾಗಬೇಕು. ಕಳೆದ 50 ವರ್ಷಗಳಲ್ಲಿ ಯಾವುದೇ ಸರ್ಕಾರ ಇರಲಿ ಒಂದು ಅಣೆಕಟ್ಟೆಯನ್ನು ಕಟ್ಟಲು ಸಾಧ್ಯವಾಗಿಲ್ಲ. ಅಣೆಕಟ್ಟು ಕಟ್ಟುವಷ್ಟು ಅನುದಾನ ಲಭ್ಯವಿದೆ. ನುರಿತ ತಂತ್ರಜ್ಞರು ಇದ್ದಾರೆ. ಆದರೆ ಕಮಿಷನ್ ಆಸೆಗಾಗಿ ಈವರೆಗೂ ಒಂದೇ ಒಂದು ಡ್ಯಾಮ್ ಕಟ್ಟಲು ಸಾಧ್ಯವಾಗಿಲ್ಲ.

ತುಂಗಭದ್ರಾ ಅಣೆಕಟ್ಟೆಯಲ್ಲಿ ಹೂಳು ತುಂಬಿದೆ. ಅದನ್ನ ತೆರವುಗೊಳಿಸಬೇಕಾದರೆ ಸಮಾನಾಂತರವಾದ ಮತ್ತೊಂದು ಡ್ಯಾಮ್ ಕಟ್ಟಬೇಕು ಎನ್ನುವ ಚಿಂತನೆ ದಶಕದಿಂದಲೂ ಕೇಳಿ ಬರುತ್ತಿದೆ. ನವಲಿ ಬಳಿ ತುಂಗಭದ್ರಾ ನದಿಗೆ ಸಮಾನಾಂತರ ಅಣೆಕಟ್ಟು ಕಟ್ಟಬೇಕು ಎಂದು ಒಂದುವರೆ ದಶಕದಿಂದ ಯೋಜನೆ ರೂಪಿಸಲಾಗುತ್ತಿದೆ. ಆದರೆ ಈವರೆಗೂ ಭೂಮಿ ಪೂಜೆ ಮಾಡಲು ಸಾಧ್ಯವಾಗಿಲ್ಲ.

ಹೊಸ ಅಣೆಕಟ್ಟು ನಿರ್ಮಾಣ ಬಿಡಿ, ಹಳೆಯ ಅಣೆಕಟ್ಟುಗಳ ದುರಸ್ತಿ ನಿರ್ವಹಣೆಗೂ ಸರ್ಕಾರ ಅನುದಾನ ನೀಡುತ್ತಿಲ್ಲ. ಅನುದಾನ ಸಕಾಲದಲ್ಲಿ ಬಿಡುಗಡೆಯಾಗದೆ, ನಿರ್ವಹಣೆ ಮತ್ತು ಸಣ್ಣಪುಟ್ಟ ರಿಪೇರಿಯೂ ಸಹ ಸರಿಯಾದ ಸಮಯಕ್ಕೆ ಆಗುತ್ತಿಲ್ಲ. ಆ ಕಾರಣಕ್ಕಾಗಿ ತುಂಗಭದ್ರಾ ಡ್ಯಾಮ್ ನ ಗೇಟ್ ಕಿತ್ತು ಹೋಗಿರುವುದು.

ಇದು ಕೇವಲ ಉದಾಹರಣೆ ಮಾತ್ರ. ರಾಜ್ಯದ ಪ್ರಮುಖ ಜಲಾಶಯಗಳಲ್ಲಿ ಈ ರೀತಿಯ ನಿರ್ವಹಣೆಗೆ ಸರ್ಕಾರ ಉದಾಸೀನ ಮಾಡುತ್ತಿದೆ. ಸರ್ಕಾರದ ಈ ನಿರ್ಲಕ್ಷ ಧೋರಣೆಯಂತಹ ಗಂಭೀರ ಪರಿಸ್ಥಿತಿ ತಂದೊಡ್ಡಲಿದೆ ಎನ್ನುವುದನ್ನು ತುಂಗಭದ್ರಾ ಡ್ಯಾಮ್‌ನ್ನು ಉದಾಹರಣೆಯಾಗಿ ಪರಿಗಣಿಸಬಹುದು.

ರಾಜ್ಯ ಸರ್ಕಾರ ಇನ್ನಾದರೂ ರಾಜ್ಯದ ಪ್ರಮುಖ ಜಲಾಶಯಗಳ ನಿರ್ವಹಣೆ, ದುರಸ್ತಿಗೆ ಮೊದಲ ಆದ್ಯತೆ ನೀಡಬೇಕು. ನೀರಾವರಿ ಕುಡಿಯುವ ನೀರಿನ ಉದ್ದೇಶಕ್ಕೆ ನೀರು ಹಿಡಿದಿಟ್ಟುಕೊಳ್ಳುವುದು ಅತ್ಯವಶ್ಯಕವಾಗಿದೆ. ಅದಕ್ಕಾಗಿ ಸರ್ಕಾರ ಮೊದಲ ಆದ್ಯತೆ ನೀಡಬೇಕಿದೆ. ನಿರ್ಮಾಣಕ್ಕೆ ನೀಡುವ ದುಪ್ಪಟ್ಟು ಆದ್ಯತೆಯನ್ನು ನಿರ್ವಹಣೆಗೆ ನೀಡುವ ಮನಸ್ಥಿತಿಯನ್ನು ಸರ್ಕಾರ ಬೆಳೆಸಿಕೊಳ್ಳಲಿ.

# ಇಂದಿನ ನೀರು ಪೂರೈಕೆ ವಿವರ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 13ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 21, 22 ವಿಜಯನಗರ ಶಾಲೆ, ಹನುಮಂತ ದೇವರ ಗುಡಿ, ವಾಲ್ಮೀಕಿ ಭವನ, ಕಮತರ ಪ್ಲಾಟ್, ಶಿಗ್ಗಾವಿ ಲೇಔಟ್, ಕರುಗಲ್ ಲೇಔಟ್, ಟವರ್ ಕಂಬ. ವಾರ್ಡ್ ನಂ. 30, 34 ವಡ್ಡರಗೇರಿ 46 ಪ್ಲಾಟ್, ಹುಡ್ಕೋ 1,2,3 ನೇ ಕ್ರಾಸ್, ಶಿವಾನಂದ ಗಾರ್ಡನ್.

ವಾರ್ಡ್ ನಂ. 11 ರಿಂಗ್ ರೋಡ್ 4ನೇ ಕ್ರಾಸ್. ವಾರ್ಡ್ ನಂ. 6 ಪವಾರ, ಮಾಕಾಪೂರ, ಮಳಲಿ ಪೂಜಾರ, ನಾವಳ್ಳಿಯವರ ಲೈನಗಳು, ಮುಸ್ಕಿನ ಪ್ಲಾಟ್ ಭಾಗ -1,2 ಪಿಪಿ ಗುಡಿ ಲೈನ್. ವಾರ್ಡ್ ನಂ. 24, 26 ತೆಗ್ಗಿನ ಲಾಟ್, ಸಾಲಮನೆ, ಅಬ್ಬಿಗೇರಿ ಕಾಂಪೌಂಡ್, ಹಳೆ ಡಿಸಿ ಆಫೀಸ್ ಲೈನ್, ಕಮ್ಮಾರ ಸಾಲ, ಉಡಚಮ್ಮನ ಗುಡಿ ಲೈನ್, ಮಕಾನಗಲ್ಲಿ, ಉರ್ದು ಶಾಲೆ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 20 ಪಡಗದ ಭಾಗ -1,2. ಸಿಂಧನೂರ ಲೈನ್ ಎಸ್ ಟಿ ಡಿ, ಬೇವಿನಮರದಮ್ಮ, ಖಾನತೋಟ. ವಾರ್ಡ್ ನಂ. 1 ಎಸ ಎಂ ಕೃಷ್ಣ ನಗರ ಮೇಲಿನ ಭಾಗ, ಕೆಳಗಿನ ಭಾಗ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಾಂಧೀಜಿ ನಿಮಗೊಂದು ಸಲಾಂಜೀ



ಭಾರತದ ಹೆಮ್ಮೆಯ ಪುತ್ರ
ಸ್ವತಂತ್ರ ಸಂಗ್ರಾಮದಲ್ಲಿ ನಾಯಕನ ಪಾತ್ರ
ಖಾದಿ ಬಿಳಿ ಪಂಜಿ ನಿನ್ನ ಸಮವಸ್ತ್ರ
ಸತ್ಯ ಅಹಿಂಸೆ ಶಾಂತಿಯೇ ಮೂಲ ಅಸ್ತ್ರ (1)

ಇತಿಹಾಸ ಪುಟದಲ್ಲಿ ಬಾವುಟ ಚಿತ್ರ
ದೇಶಪ್ರೇಮಕ್ಕಾಗಿ ಹರಿಸಿದೆ ಪ್ರಾಣ ನೇತ್ರ
ಪ್ರತಿ ಶಾಲೆ ಕಾಲೇಜು ಕಚೇರಿಗಳಲ್ಲಿ ನಿನ್ನ ಭಾವಚಿತ್ರ
ರಾಷ್ಟ್ರ ತುಂಬೆಲ್ಲ ಬಾವುಟ ಬಾನಂಗಳದತ್ತ ಪವಿತ್ರ (2)

ನಮ್ಮ ಹೋರಾಟಗಾರರಿಗೆ ನೀಡಿದೆ ನೀ ಸ್ಫೂರ್ತಿ
ಭಾರತ ದೇಶವನ್ನು ಸ್ವತಂತ್ರಗೊಳಿಸಿದ ಸಹಕಾರ ಮೂರ್ತಿ
ಇತಿಹಾಸ ಸ್ವತಂತ್ರ ಸಂಗ್ರಾಮದಲ್ಲಿ ಗಾಂಧೀಜಿ ಕೀರ್ತಿ
ಪ್ರತಿ ತಾಯಿಯ ಮಡಿಲಲ್ಲಿ ಮತ್ತೆ ಮತ್ತೆ ಹುಟ್ಟಿ ಬರುತಿ (3)

ಏ ಮಾನವ ಮಾಡು ಇಲ್ಲವೇ ಮಡಿ
ಹಗಲು ಇರುಳು ದೇಶಕ್ಕಾಗಿ ನೀ ದುಡಿ
ಭಾರತಾಂಬೆ, ಭುವನೇಶ್ವರಿ ತಾಯಿಯ ಕನ್ನಡ ಸಾಹಿತ್ಯದ ನುಡಿ
ಸತ್ಯ ಹರಿಶ್ಚಂದ್ರನಂತೆ ನೀ ಪ್ರಸಿದ್ಧಿ ಪಡಿ (4)

ಬ್ರಿಟಿಷರಿಗೆ ಕೆಚ್ಚೆದೆಯ ಇಂಡಿಯನ್ ಪೌಜಿ
ಇಡೀ ರಾಷ್ಟ್ರವೇ ಪ್ರೀತಿಯಿಂದ ಕೂಗುವುದು ಬಾಪೂಜಿ
ಗಾಂಧೀಜಿ ನಿಮಗೆ ನನ್ನದೊಂದು ಸಲಾಂ ಜೀ
ಮನೆ ಮನೆಯಲ್ಲಿ ಇಂದು ವಿಜಯೋತ್ಸವೋ ಜೀ (4)

**– ಸುವರ್ಣ ಮಾಳಗಿಮನಿ (ಬಸುಮಾ)**
**ಬಂಕಾಪೂರ, ಹಾವೇರಿ.**

# ಲಿಂಗಾಯತ ಪ್ರಗತಿಶೀಲ ಸಂಘದ ನೂತನ ಪದಾಧಿಕಾರಿಗಳು



ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಲಿಂಗಾಯತ ಪ್ರಗತಿಶೀಲ ಸಂಘ ವಿಶಿಷ್ಟವಾದ ಸಂಸ್ಥೆ. ಲಿಂ.ಡಾ. ತೋಂಟದ ಸಿದ್ಧಲಿಂಗ ಶ್ರೀಗಳು ಈ ಸಂಸ್ಥೆಯ ಮುಖೇನ ನಡೆಸಿದ ಶಿವಾನುಭವ ಕಾರ್ಯಕ್ರಮಗಳು ದಶಕಗಳಿಂದ ನಡೆದುಕೊಂಡು ಬಂದು ಇತಿಹಾಸ ಸೃಷ್ಟಿಸಿವೆ. ಪ್ರತಿ ವರ್ಷ ಉತ್ಸಾಹಿ ಹಿರಿಯ-ಕಿರಿಯ ಪದಾಧಿಕಾರಿಗಳು ಸಂಘದ ಪದಾಧಿಕಾರಿಗಳಾಗಿ ಆಯ್ಕೆಯಾಗಿ ವರ್ಷದುದ್ದಕ್ಕೂ ವಿಧಾಯಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಾರೆ. 2024-25ನೇ ಸಾಲಿನ ಲಿಂಗಾಯತ ಪ್ರಗತಿಶೀಲ ಸಂಘದ ಸರ್ವಸಾಮಾನ್ಯ ಸದಸ್ಯರ ಸಭೆಯಲ್ಲಿ ಆಯ್ಕೆಯಾದ ನೂತನ ಪದಾಧಿಕಾರಿಗಳ ಸಂಕ್ಷಿಪ್ತ ಪರಿಚಯ ಇಂತಿದೆ.

**ಶರಣ ಬಾಲಚಂದ್ರ ಭರಮಗೌಡರ-ಅಧ್ಯಕ್ಷರು** : ನಗರದ ಭರಮಗೌಡ್ರ ಮನೆತನದ ಬಾಲಚಂದ್ರ ಅವರು ವಾಣಿಜ್ಯ ವಿಷಯದಲ್ಲಿ ಪದವೀಧರರು. ನಗರದ ಹಲವಾರು ಸಂಘ ಸಂಸ್ಥೆಗಳಲ್ಲಿ ಪದಾಧಿಕಾರಿಗಳಾಗಿ ಸೇವೆ ಸಲ್ಲಿಸಿದ್ದಾರೆ. ತೋಂಟದಾರ್ಯ ಜಾತ್ರಾ ಸಮಿತಿ ಅಧ್ಯಕ್ಷರಾಗಿ ಮತ್ತು ಶ್ರೀಮಠದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸೇವೆ ಸಲ್ಲಿಸುತ್ತಾ ಬಂದಿದ್ದಾರೆ.

**ಶರಣ ಡಾ. ಉಮೇಶ ವೀ.ಪುರದ-ಉಪಾಧ್ಯಕ್ಷರು** : ಶಿರಹಟ್ಟಿ ತಾಲೂಕು ಬನ್ನಿಕೊಪ್ಪ ಗ್ರಾಮದಲ್ಲಿ ಜನಿಸಿದ ಡಾ. ಉಮೇಶ ವೀ.ಪುರದ ಹುಟ್ಟೂರಿನಲ್ಲಿ ಪ್ರಾಥಮಿಕ ಶಿಕ್ಷಣ, ಧಾರವಾಡದಲ್ಲಿ ಪಿಯುಸಿ ಅದ್ಯಯನ ಮಾಡಿ ಗದುಗಿನ ಡಿ.ಜಿ.ಎಂ. ಆಯುರ್ವೇದ ಮೆಡಿಕಲ್ ಕಾಲೇಜಿನಲ್ಲಿ ಬಿ.ಎ.ಎಂ.ಎಸ್. ಪದವಿಗೆ ಪ್ರವೇಶ ಪಡೆದರು. ಕರ್ನಾಟಕ ವಿಶ್ವವಿದ್ಯಾಲಯಕ್ಕೆ ಪ್ರಥಮ ರಾಂಕ್ ಪಡೆದು ಪಾಸ್ ಆಗಿದ್ದಾರೆ. ಇದೇ ಮಹಾವಿದ್ಯಾಲಯದಲ್ಲಿ ಎಂ.ಡಿ. ವ್ಯಾಸಾಂಗ ಮಾಡಿ ಕಲಿತ ಮಹಾವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಾಚಾರ್ಯರಾಗಿ ಪದೋನ್ನತಿ ಹೊಂದಿ ನಾಲ್ಕು ವರ್ಷ ಸೇವೆ ಮಾಡಿ ನಿವೃತ್ತಿಯಾಗಿದ್ದಾರೆ. ಅತ್ಯುತ್ತಮ ಆಯುರ್ವೇದ ವೈದ್ಯರಾಗಿರುವ ಇವರು ಪಾರ್ಶ್ವವಾಯು ಮತ್ತು ನರ ರೋಗಗಳಿಗೆ ಚಿಕಿತ್ಸೆ ಮಾಡುತ್ತಾ ಜನಾನುರಾಗಿ ವೈದ್ಯರಾಗಿದ್ದಾರೆ. ಚರಕಶ್ರೀ, ಮಾಧವ ವಿಭೂಷಣ, ವೈದ್ಯ ರತ್ನ ಮುಂತಾದ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.

**ಶರಣೆ ವಿದ್ಯಾವತಿ ಪ್ರಭು ಗಂಜಿಹಾಳ - ಉಪಾಧ್ಯಕ್ಷರು** : ಆದರ್ಶ ಗೃಹಿಣಿಯಾಗಿರುವ ವಿದ್ಯಾವತಿ ಗಂಜಿಹಾಳ ನಗರದ ಪ್ರಮುಖ ಸಂಘ ಸಂಸ್ಥೆಗಲ್ಲಿ ಅತ್ಯಂತ ಕ್ರೀಯಾಶೀಲತೆಯಿಂದ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ. ನಗರದ ಇನ್ನರ್‌ವೀಲ್ ಕ್ಲಬ್, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ಕದಳಿ ಮಹಿಳಾ ವೇದಿಕೆ, ಕನ್ನಡ ಸಾಹಿತ್ಯ ಪರಿಷತ್ತು ಹೀಗೆ ಪ್ರಮುಖ ಸಂಸ್ಥೆಗಳಲ್ಲಿ ಸದಸ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

**ಶರಣ ವೀರಣ್ಣ ಬಾಬಣ್ಣ ಗೋಟಡಕಿ -ಕಾರ್ಯದರ್ಶಿ** : ಬಿಕಾಂ ಪದವಿದರರಾದ ವೀರಣ್ಣ ಗೋಟಡಕಿ ಸರಳ ಸಜ್ಜನಿಕೆ ಸೇವಾ ಮನೋಭಾವದವರು. ನಗರದ ವ್ಯಾಪಾರಸ್ಥರಾದ ಶ್ರೀಯುತರು ತೆ-ೂಂಟದಾರ್ಯ ಮಠದ ಮೀಸಲು ಭಕ್ತರೂ ಹೌದು. ಯಳಂದೂರ ಯೋಗ ಪಾಠಶಾಲೆ ಪ್ರಾರಂಭಿಸಿದ ಸದಸ್ಯರಲ್ಲಿ ಇವರು ಒಬ್ಬರು. ಲಿಂ. ಡಾ. ತೋಂಟ-ದ ಸಿದ್ಧಲಿಂಗ ಮಹಾಸ್ವಾಮಿಗಳವರ ಜೊತೆಗೆ ಡಂಬಳಕ್ಕೆ ಪಾದಯಾತ್ರೆಯಲ್ಲಿ ಪಾಲ್ಗೊಳ್ಳುತ್ತಿದ್ದರು.

**ಶರಣ ಸೋಮನಾಥ ಸಿದ್ಧರಾಮಪ್ಪ ಪುರಾಣಿಕ - ಸಹಕಾರ್ಯದರ್ಶಿ** : ಸಂಘಟನಾ ಚತುರರಾಗಿರುವ ಸೋಮಶೇಖರ ಅವರು ಸಾಮಾಜಿಕ ಸೇವೆಯಲ್ಲಿ ಸದಾ ತಮ್ಮನ್ನು ತಾವು ತೊಡಗಿಸಿಕೊಂಡಿರುತ್ತಾರೆ. ಎನಿಮೇಶನ್ ವಿಷಯದಲ್ಲಿ ಬಿ.ಎಸ್.ಸಿ. ಪದವಿ ಪಡೆದಿರುವ ಸೋಮಶೇಖರ ಅವರು ಕಟ್ಟಡದ ಒಳ ಮತ್ತು ಹೊರ ವಿನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ತಾಂತ್ರಿಕ ಸಲಕರಣೆ ಬಳಕೆಯಲ್ಲಿ ಪರಿಣಿತಿಯನ್ನು ಹೊಂದಿದ್ದಾರೆ. ಶ್ರೀಮಠದ ಕಾರ್ಯಚಟುವಟಿಕೆಗಳಲ್ಲಿ ಕ್ರಿಯಾಶೀಲರಾಗಿ ಸೇವೆ ಸಲ್ಲಿಸುತ್ತಾ ಬಂದಿದ್ದಾರೆ.

**ಶರಣ ನಾಗರಾಜ ಗಂಗಾಧರ ಹಿರೇಮಠ-ಸಹಕಾರ್ಯದರ್ಶಿ** : ಮೆಕ್ಯಾನಿಕಲ್ ಇಂಜಿನಿಯರಿಂಗ್ ಪದವೀಧರರಾದ ನಾಗರಾಜ ಗಂಗಾಧರ ಹಿರೇಮಠ ನಗರದ ಗಣ್ಯ ಉದ್ಯಮಿಗಳು. ಪ್ರತಿಷ್ಠಿತ ಸುಸಂಸ್ಕೃತ ಮನೆತನದವರಾದ ಶ್ರೀಯುತರು ಗದಗ ಕೋ-ಆಪರೇಟಿವ್ ಇಂಡಸ್ಟ್ರಿಯಲ್ ಎಸ್ಟೇಟ್, ಚೆಂಬರ್ ಆಫ್ ಕಾಮರ್ಸ್, ಜಿ-ಎನ್.ಟಿ.ಟಿ.ಎಫ್. ಸಿ.ಡಿ.ಸಿ. ಕಾಲೇಜ ಗದಗ ಇಲ್ಲಿ ಸದಸ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

**ಶರಣ ಮಹೇಶ ಗಂಗಾಧರ ಗಾಣಿಗೇರ-ಸಂಘಟನಾ ಕಾರ್ಯದರ್ಶಿ** : ಹುಬ್ಬಳ್ಳಿ ತಾಲ್ಲೂಕ ಕೋಳಿವಾಡ ಗ್ರಾಮದ ಪ್ರತಿಷ್ಠಿತ ಗಾಣಿಗೇರ (ಕರಲಿಂಗಣ್ಣವರ) ಮನೆತನದವರಾದ ಮಹೇಶ ಗಾಣಿಗೇರ ಅವರು ವಾಣಿಜ್ಯ ವಿಷಯದಲ್ಲಿ ಪದವಿ ಪಡೆದಿದ್ದಾರೆ. ಗದಗ ನಗರದ ಎ.ಪಿ.ಎಂ.ಸಿ. ಯಲ್ಲಿ ಶ್ರೀ ಕಲ್ಮೇಶ್ವರ ಟ್ರೇಡಿಂಗ್ ಕಂಪನಿ ಮಾಲಿಕರಾದ ಇವರು ಶ್ರೀಮಠದ ಜಾತ್ರಾ ಸಮಿತಿ ಮತ್ತು ಪ್ರಮುಖ ಧಾರ್ಮಿಕ ಚಟುವಟಿಕೆಯಲ್ಲಿ ಸದಸ್ಯರಾಗಿ ಸೇವೆ ಸಲ್ಲಿಸುತ್ತಾ ಬಂದಿದ್ದಾರೆ.

**ಶರಣ ಬಸವರಾಜ ಸಿದ್ಧಪ್ಪ ಕಾಡಪ್ಪನವರ - ಕೋಶಾಧ್ಯಕ್ಷರು** : ಬಸವರಾಜ ಕಾಡಪ್ಪನವರ ಶ್ರೀಮಠದ ಪರಮಭಕ್ತರು. ಪ್ಲಾಸ್ಟಿಕ್ ಖಾಲಿ ಚೀಲ ತಯಾರಿಕಾ ಘಟಕ ಹೊಂದಿದ್ದಾರೆ. ಲಿಂಗಾಯತ ಪ್ರಗತಿಶೀಲ ಸಂಘದ 2015-16ನೇ ಸಾಲಿನ ಕಾರ್ಯದರ್ಶಿಯಾಗಿ ಮತ್ತು 2018-19ನೇ ಸಾಲಿನ ಜಾತ್ರಾ ಮಹೋತ್ಸವದಲ್ಲಿ ಸಂಘಟನಾ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದಾರೆ. ಶಂಕರ ಗ್ಲೋಬಲ್ ಶಾಲೆಯ ನಿರ್ದೇಶಕರೂ ಆಗಿದ್ದಾರೆ.

**ಶರಣ ಐ.ಬಿ. ಬೆನಕೊಪ್ಪ-ಶಿವಾನುಭವ ಸಮಿತಿ ಚೇರಮನ್** : ಶಿಕ್ಷಣ ಇಲಾಖೆಯಲ್ಲಿ ಉಪನಿರ್ದೇಶಕರಾಗಿ ನಿವೃತ್ತಿ ಹೊಂದಿದ ಐ.ಬಿ. ಬೆನಕೊಪ್ಪ ಅವರು ಧಾರವಾಡ ಜಿಲ್ಲೆಯ ತುಪ್ಪದಕುರಹಟ್ಟಿ ಗ್ರಾಮದವರು. ಶಿಕ್ಷಣ ಕ್ಷೇತ್ರಕ್ಕೆ ಇವರ ಕೊಡುಗೆ ಅಪಾರ. ಸರಳ ಸಜ್ಜನ ಸ್ವಭಾವದವರಾದ ಐ.ಬಿ. ಬೆನಕೊಪ್ಪ ಅವರು ಅನೇಕ ಕೃತಿಗಳನ್ನು ಬರೆದಿದ್ದಾರೆ. ಶರಣ ಶಿವಾನಂದ ಪರಮೇಶ್ವರಪ್ಪ ಹೊಂಬಳ-ಶಿವಾನುಭವ ಸಮಿತಿ ಸಹಚೇರಮನ್ : ಗದಗ ನಗರದಲ್ಲಿ ಪ್ರಾಥಮಿಕ, ಪ್ರೌಢ, ಪಿಯುಸಿ ಹಾಗೂ ಪದವಿ ಶಿಕ್ಷಣ ಪಡೆದ ಶಿವಾನಂದ ಹೊಂಬಳ 1986ರಿಂದ ಕನ್ನಡ ಉಪನ್ಯಾಸಕರಾಗಿ ಬಳ್ಳಾರಿಯ ಶ್ರೀ ಉಜ್ಜಯಿನಿ ಜಗದ್ಗುರು ಸಿದ್ಧೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ಸುದೀರ್ಘ 38 ವರ್ಷಗಳವರೆಗೆ ಸೇವೆ ಸಲ್ಲಿಸಿ 2023 ಜುಲೈ ತಿಂಗಳಿನಲ್ಲಿ ಸೇವೆಯಿಂದ ನಿವೃತ್ತಿ ಹೊಂದಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಶರಣ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯರು.

**-ಮಂಜುನಾಥ ಎಂ.ಜಿ, ಗದಗ**

### ಹಾಲಕೆರೆ ಮಠದ ಬೆಳ್ಳಿ ರಥೋತ್ಸವಕ್ಕೆ ಚಾಲನೆ ನೀಡಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್

# ಸರ್ವರ ಏಳಿಗೆಯೇ ಸರ್ಕಾರದ ಆಶಯ

**■ ವಿಜಯಸಾಕ್ಷಿ ಸುದ್ದಿ, ಗದಗ**

ಮಠಮಾನ್ಯಗಳನ್ನು ಆದರ್ಶವಾಗಿಟ್ಟುಕೊಂಡು ಎಲ್ಲರನ್ನು ಮೇಲೆ ತರಬೇಕು ಎನ್ನುವುದು ಸರ್ಕಾರದ ಆಶಯವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಜಿಲ್ಲೆಯ ಗಜೇಂದ್ರಗಡ ತಾಲೂಕಿನ ಹಾಲಕೆರೆ ಮಠದ ಬೆಳ್ಳಿ ರಥೋತ್ಸವಕ್ಕೆ ಚಾಲನೆ ನೀಡಿದ ಬಳಿಕ ಮಾತನಾಡಿದ ಸಚಿವರು, ಮಠಾಧೀಶರ ತ್ಯಾಗವನ್ನು ಎಲ್ಲರೂ ಸ್ಮರಿಸಬೇಕು, ಸಮಾಜವನ್ನು ಉನ್ನತಮಟ್ಟಕ್ಕೇರಿಸಲು ಎಲ್ಲರೂ ಕೈಜೋಡಿಸಬೇಕು. ಇಡೀ ವಿಶ್ವದಲ್ಲೇ ಅತ್ಯಂತ ಶ್ರೀಮಂತಿಕ ಹೊಂದಿರುವ ಸಂಸ್ಕೃತಿ ನಮ್ಮದು. 5 ಸಾವಿರ ವರ್ಷಗಳ ಇತಿಹಾಸ ಹೊಂದಿರುವ ಭಾರತದಲ್ಲಿ ಸಂಸ್ಕೃತಿ ಉಳಿಯಲು ಮಠಗಳ ಪಾತ್ರ ಬಹುದೊಡ್ಡದು ಎಂದು ಹೇಳಿದರು.


ಕರ್ನಾಟಕದಲ್ಲಿರುವ ಬಹುತೇಕ ಮಠಗಳಲ್ಲಿ ಎಲ್ಲಾ ಮಠಾಧೀಶರು ಕೂಡ ಬಹಳಷ್ಟು ಕಿರಿಯರು, ಇದನ್ನೆಲ್ಲಾ ನೋಡಿದರೆ ಮುಂದಿನ 100 ವರ್ಷಗಳ ಕಾಲ ಭಾರತದ ಸಂಸ್ಕೃತಿ ಇನ್ನಷ್ಟು ಗಟ್ಟಿಯಾಗಿರಲಿದೆ ಎಂದು ತೋರಿಸುತ್ತದೆ ಎಂದರು.

**ಸರ್ಕಾರಕ್ಕೆ ಮಠಗಳ ಮಾರ್ಗದರ್ಶನ ಅಗತ್ಯ**

ಭಾರತದಲ್ಲಿ ಸರ್ಕಾರಗಳಿಗೆ ಮಠಗಳ ಮಾರ್ಗದರ್ಶನ ಅತ್ಯಗತ್ಯ. ಸರ್ಕಾರಕ್ಕೆ ಉತ್ತಮ ಮಾರ್ಗದರ್ಶನ ನೀಡುತ್ತಿರುವುದೇ ಮಠಗಳು, ಮಠಾಧೀಶರು, ಅಕ್ಷರ ದಾಸೋಹ, ಅನ್ನ ದಾಸೋಹ, ಆರೋಗ್ಯ ದಾಸೋಹ, ಆಶ್ರಯ ದಾಸೋಹ ಹೀಗೆ ಎಲ್ಲವನ್ನು ಆರಂಭಿಸಿದ್ದೇ ಮಠಗಳು. ಸಮಾಜದ ಅಂಕುಡೊಂಕುಗಳನ್ನು ತಿದ್ದುವಲ್ಲಿ ಮಠಗಳು ಪ್ರಮುಖ ಪಾತ್ರವಹಿಸುತ್ತಿವೆ. ಸಮಾಜದ ಏಳಿಗೆಗೆ ಟೊಂಕಕಟ್ಟಿ ನಿಂತುಕೊಂಡಿವೆ. ಇಂಥ ಮಠಗಳನ್ನು ಪಡೆದಿರುವ ನಾವೇ ಧನ್ಯರು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಶ್ಲಾಘಿಸಿದರು.

**ಮಾನವ ಜನ್ಮ ದೊಡ್ಡದು**

ಜಗತ್ತಿನಲ್ಲಿ ಹಲವು ಜೀವರಾಶಿಗಳಿದ್ದರೂ ಮಾನವ ಜನ್ಮ ದೊಡ್ಡದು. ಸಮಾಜ ನಿನಗೇನು ಕೊಟ್ಟಿತು ಎನ್ನುವುದಕ್ಕಿಂತ ಸಮಾಜಕ್ಕೆ ನೀನೇನು ಕೊಟ್ಟೆ ಎನ್ನುವುದು ಮುಖ್ಯ. ನಾಲ್ಕು ಜನರು ನಮ್ಮನ್ನು ನೋಡಿ ಕಲಿಯಬೇಕು. ನಾನು ಕೂಡ ಎಲ್ಲರಂತೆ ಸಾಮಾನ್ಯ ಕುಟುಂಬದಿಂದ ಬಂದವಳು. ಹುಟ್ಟು ಹೋರಾಟದ ಮನೋಭಾವದಿಂದ ಬಂದವಳು. ಹೀಗಾಗಿಯೇ ಇಂದು ರಾಜ್ಯ ಸಚಿವ ಸಂಪುಟದಲ್ಲಿ ಸಚಿವೆಯಾಗಿರುವೆ ಎಂದು ಹೇಳಿದರು.



### ಹೆಂಗಸರು ಕೂಡ ಮನೆ ನಡೆಸಲು ಕೈಜೋಡಿಸಬೇಕು

ಅಣ್ಣಾ ಬಸವಣ್ಣ 12ನೇ ಶತಮಾನದಲ್ಲೇ ಹೆಣ್ಣು ಗಂಡು ಸಮಾನರು ಎಂಬ ಸಂದೇಶ ಸಾರಿದ್ದರು. ಅಕ್ಕಮಹಾದೇವಿ ಹೇಳಿದಂತೆ ಹೆಣ್ಣುಮಕ್ಕಳನ್ನು ನೋಡುವ ದೃಷ್ಟಿಯೂ ಒಳ್ಳೆದಾಗಿರಬೇಕು. ಬರೀ ಹೆಣ್ಣುಮಕ್ಕಳಷ್ಟೇ ಸಂಸ್ಕೃತಿ ಕಲಿತರೆ ಸಾಲದು, ಹೆಣ್ಣು ಸಂಸಾರದ ಕಣ್ಣು ಎಂಬಂತೆ ಗಂಡು ಕೂಡ ಮನೆಯ ಕಣ್ಣು ಎಂಬ ಮನೋಭಾವ ಎಲ್ಲರಲ್ಲೂ ಮೂಡಬೇಕು. ಆಗಷ್ಟೆ ಸಮಾಜದಲ್ಲಿ ಸಮಾನತೆ ತರಲು ಸಾಧ್ಯ. ಹೆಣ್ಣು ಇವತ್ತು ಯಾವುದಕ್ಕೂ ಕಡಿಮೆ ಇಲ್ಲ. ಆದರೆ, ನಮ್ಮ ಹಕ್ಕಿಗೆ ನಾವು ಹೋರಾಡಬೇಕಾಗಿದೆ ಎಂದು ಸಚಿವರು ಹೇಳಿದರು.

ಮನೆಗೆ ಹೆಣ್ಣು ದೀಪ ಆಗಬೇಕು, ಹೆಸರು ತರಬೇಕು ನಿಜ. ಹೆಣ್ಣನ್ನ ಗಂಗೆ, ಭೂಮಿಗೆ ಹೋಲಿಸಲಾಗಿದೆ. ಮಹಿಳಾ ಸಮಬಲೀಕರಣದ ಬಗ್ಗೆ ಮಾತನಾಡುತ್ತೇವೆ. ಆರ್ಥಿಕವಾಗಿ, ಶೈಕ್ಷಣಿಕವಾಗಿ ಸಬಲೀಕರಣ ಆಗಬೇಕು. ದೇಶ, ರಾಜ್ಯ ಬೆಳೆಯಬೇಕು ಅಂದರೆ ಹೆಣ್ಣು ಸಬಲರಾಗಬೇಕು ಎಂದು ತಿಳಿಸಿದರು.

ಇವತ್ತು ರಾಜಕಾರಣ ಕಷ್ಟ, ಇಲ್ಲಿ ಕ್ಷಣಕ್ಷಣಕ್ಕೂ ಅಗ್ನಿಪರೀಕ್ಷೆ ಎದುರಾಗುತ್ತೆ, ಅದರಲ್ಲೂ ಮಹಿಳೆಯರಿಗಂತೂ ತುಂಬಾ ಕಷ್ಟ. ರಾಜಕಾರಣದಲ್ಲಿ ಪುರುಷರು 100 ಮೀಟರ್ ಓಡಿ ಬಹುಮಾನ ಪಡೆಯುತ್ತಾರೆ, ಆದರೆ, ಮಹಿಳೆ ಸಾವಿರ ಮೀಟರ್ ಓಡಿದರೂ ಕಷ್ಟ. ಇದೊಂದು ಮಹಿಳೆಯರ ಪಾಲಿಗೆ ಸವಾಲಿನ ಕ್ಷೇತ್ರ.

**– ಲಕ್ಷ್ಮೀ ಹೆಬ್ಬಾಳಕರ್, ಸಚಿವರು,** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.

ಹಾಲಕೆರೆ ಮಠದ ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಕಾರ್ಯಕ್ರಮದಲ್ಲಿ ವಳಬಳ್ಳಾರಿ ಸುವರ್ಣಗಿರಿ ವಿರಕ್ತ ಮಠದ

ಸಿದ್ದಲಿಂಗ ಮಹಾಸ್ವಾಮಿಗಳು, ಸಂತೆಕಲ್ಲೂರಿನ ಘನಮಠೇಶ್ವರಮಠದ

ಗುರುಬಸವ ಮಹಾಸ್ವಾಮಿಗಳು, ನೀಲಗುಂದದ ಪ್ರಭುಲಿಂಗ ಮಹಾಸ್ವಾಮಿಗಳು, ಕರೇಗುಡ್ಡ ಮಹಾಂತೇಶ್ವರ ಮಠದ

ಮಹಾಂತಲಿಂಗ ಶಿವಾಚಾರ್ಯರು, ವಳಬಳ್ಳಾರಿ ಸುವರ್ಣಗಿರಿ ವಿರಕ್ತ ಮಠದ ಬಸವಲಿಂಗ ಮಹಾಸ್ವಾಮಿಗಳು, ಖೇಳಗಿ ಶ್ರೀ ಶಿವಲಿಂಗೇಶ್ವರಮಠದ ಶಿವಲಿಂಗ ಮಹಾಸ್ವಾಮಿಗಳು, ಸೋಮಸಮುದ್ರದ ಸಿದ್ದಲಿಂಗ ದೇಶಿಕರು, ಶ್ರೀಧರಗಡ್ಡೆಯ ಮರಿಕೊಟ್ಟೂರು ದೇಶಿಕರು, ರೋಣ ಅಕ್ಕನಬಳಗದ ಅಧ್ಯಕ್ಷರಾದ ಅನ್ನಪೂರ್ಣ ಜಿ. ಪಾಟೀಲ, ಹಾಲಕೆರೆ ಕೆ.ವಿ.ಜಿ ಬ್ಯಾಂಕಿನ ಮ್ಯಾನೇಜರ್ ಶ್ರೀಮತಿ ಕದಿರಿ ಶ್ರೀರಿತಾ, ವೀಣಾ ಪಾಟೀಲ್, ಅನ್ನಪೂರ್ಣ ಪಾಟೀಲ, ಕಮಲಾ ಹುನಗುಂದ, ಹಾಲಕೆರೆ ಮಠದ ಭಕ್ತರು, ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

# ಬೆಳೆಗಳಿಗೆ ರೋಗ ಹರಡದಂತೆ ಮುನ್ನೆಚ್ಚರಿಕೆ ವಹಿಸಿ



**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಸುರಿದ ಮಳೆಯಿಂದ ಸಹಜವಾಗಿಯೇ ಭೂಮಿಯಲ್ಲಿ ತೇವಾಂಶ ಹೆಚ್ಚಾಗಿದ್ದು, ಉತ್ತಮ ಇಳುವರಿ ಪಡೆಯಲು ರೈತರು ಈಗಾಗಲೇ ಗೋವಿನಜೋಳ, ಶೇಂಗಾ ಇತ್ಯಾದಿ ಬೆಳೆಗಳನ್ನು ಬಿತ್ತನೆ ಮಾಡಿದ್ದಾರೆ. ಆದರೆ ಬೆಳೆಗಳಿಗೆ ಹಾನಿ ಮಾಡುವ ಸೈನಿಕ ಹುಳು ಮತ್ತು ಕೀಟಬಾಧೆಗಳಿಂದ ಬೆಳೆಗಳನ್ನು ರಕ್ಷಿಸಿಕೊಳ್ಳುವುದಕ್ಕೆ ರೈತರು ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕೆಂದು ಕೃಷಿ ಇಲಾಖೆ ಸಲಹೆ ನೀಡುತ್ತಿದೆ.

ಕೃಷಿ ಇಲಾಖೆ ಅಧಿಕಾರಿಗಳು ಸೈನಿಕ ಹುಳು ಕೀಟಬಾಧೆ ತಗಲುತ್ತಿರುವ ರೈತರ ಜಮೀನುಗಳಿಗೆ ತೆರಳಿ ಬೆಳೆಗಳ ರಕ್ಷಣೆಗೆ ಅಗತ್ಯ ಮುಂಜಾಗೃತಾ ಕ್ರಮಗಳನ್ನು ತಿಳಿಸಿ, ಜಾಗೃತಿ ಮೂಡಿಸುತ್ತಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಸಹಾಯಕ ಕೃಷಿ ನಿರ್ದೇಶಕ ರೇವಣೆಪ್ಪ ಮನಗೂಳಿ, ಬಿತ್ತನೆ ಪೂರ್ವದಿಂದಲೂ ಇಲಾಖೆ ಸೂಚಿಸಿದ ಹಾಗೆ ಬೀಜೋಪಚಾರ ಮಾಡುವುದು ಅವಶ್ಯ. ಇದರಿಂದ ಕೀಟಬಾಧೆಗಳಿಂದ ರೋಗಗಳನ್ನು ರಕ್ಷಿಸಿಕೊಳ್ಳಬಹುದು. ಇದೀಗ ಗೋವಿನಜೋಳ ಬೆಳೆಗೆ ಸೈನಿಕ ಹುಳು ಕೀಟಬಾಧೆ ಅಲ್ಲಲ್ಲಿ ಕಂಡು ಬರುತ್ತಿದ್ದು, ಶೇಂಗಾ ಬೆಳೆಗೂ ಸಹ ಅಲ್ಲಲ್ಲಿ ಎಲೆ ಚುಕ್ಕಿ ರೋಗ, ಎಲೆ ತಿನ್ನುವ ಕೀಟಗಳು ಕಂಡು ಬರುತ್ತಿವೆ. ಇವುಗಳ ಹತೋಟಿಗೆ ಇಲಾಖೆಯು ಸೂಚಿಸಿದ ಅಗತ್ಯ ಮುಂಜಾಗೃತಾ ಕ್ರಮಗಳನ್ನು ತುರ್ತಾಗಿ ಕೈಕೊಳ್ಳಬೇಕು. ಹೆಚ್ಚಿನ ಮಾಹಿತಿಗೆ ಹತ್ತಿರದ ರೈತ ಸಂಪರ್ಕ ಕೇಂದ್ರಕ್ಕೆ ಸಂಪರ್ಕಿಸಬಹುದಾಗಿದೆ ಎಂದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಡಿ.ದೇವರಾಜ ಅರಸು ಜನ್ಮ ದಿನಾಚರಣೆ ಕುರಿತು ಪೂರ್ವಭಾವಿ ಸಭೆಯು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ರವಿ ಗುಂಜೀಕರ್, ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ.ಕಂಬಾಳಿಮಠ, ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ, ಸಮುದಾಯದ ಮುಖ್ಯಸ್ಥರು ಸೇರಿದಂತೆ ವಿವಿದ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಬಣಜಿಗ ಕ್ಷೇಮಾಭಿವೃದ್ಧಿ ಸಂಘದ 11ನೇ ವಾರ್ಷಿಕೋತ್ಸವದಲ್ಲಿ ಡಾ. ಎ.ಕೆ. ನಾಶಿ

# ಸಮಾನತೆಯ ಹರಿಕಾರ ಬಸವಣ್ಣ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಈ ಜಗತ್ತಿನಲ್ಲಿ ಸಮಾನತೆಗಾಗಿ ಮೊದಲ ಹೆಜ್ಜೆ ಇಟ್ಟವರು ಬಸವಣ್ಣನವರು. ಆಗಿನ ಶರಣರ ಕಾಲದಿಂದಲೂ ಅಸ್ತಿತ್ವದಲ್ಲಿರುವ ಬಣಜಿಗ ಸಮಾಜದವರು ಬಸವಣ್ಣನವರ ಮೂಲ ಆಶಯಕ್ಕೆ ಸ್ಪಂದಿಸುತ್ತ ಬಂದಿದ್ದಾರೆ. ತಮ್ಮ ವ್ಯಾಪಾರ-ವಹಿವಾಟುಗಳ ಮೂಲಕ ಅವರು ಸಮಾಜದ ಮುಖ್ಯ ವಾಹಿನಿಯಲ್ಲಿ ಎಲ್ಲರೊಂದಿಗೆ ಒಂದಾಗಿ ಬೆರೆತು ಜೀವನ ಸಾಗಿಸುತ್ತಿದ್ದಾರೆ ಎಂದು ನಿವೃತ್ತ ಪ್ರಾಧ್ಯಾಪಕ ಡಾ. ಎ.ಕೆ. ನಾಶಿ ಹೇಳಿದರು.

ಪಟ್ಟಣದ ರೋಟರಿ ಭವನದಲ್ಲಿ ಜರುಗಿದ ನರೇಗಲ್ಲ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ 11ನೇ ವಾರ್ಷಿಕೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅನುಭವ ಮಂಟಪದ ಮೂಲಕ ಜಗತ್ತಿನ ಪ್ರಪ್ರಥಮ ಸಂಸತ್ತನ್ನು ಸ್ಥಾಪಿಸಿದ ಕೀರ್ತಿ ಬಸವಣ್ಣನವರಿಗೆ ಸಲ್ಲುತ್ತದೆ. ಕಾಯಕವೇ ಕೈಲಾಸ ಎಂಬುದನ್ನು ತಮ್ಮ ಜೀವನದ ಮೂಲ ಮಂತ್ರವನ್ನಾಗಿಸಿಕೊಂಡಿರುವ ಬಣಜಿಗರು ಸಮಾಜದ ವಿವಿಧ ಸ್ತರಗಳಲ್ಲಿ ತಮ್ಮ ಸೇವೆಯನ್ನು ಸಲ್ಲಿಸುತ್ತ ನೆಮ್ಮದಿಯ ಬದುಕನ್ನು ನಡೆಸುತ್ತಿದ್ದಾರೆ. ಇಂದಿನ ದಿನಗಳಲ್ಲಿ ಉಪಯೋಗಿಸಲ್ಪಡುತ್ತಿರುವ ಸ್ವಚ್ಛ ಭಾರತ



ಯೋಜನೆ ಮತ್ತು ಆತ್ಮ ನಿರ್ಭರಗಳನ್ನು ಅಂದಿನ 12ನೇ ಶತಮಾನದಲ್ಲಿಯೇ ಬಸವಣ್ಣನವರು ಜಾರಿಯಲ್ಲಿಟ್ಟಿದ್ದರು ಎಂಬುದನ್ನು ನಾವು ತಿಳಿಯಬೇಕು ಎಂದರು. ವಿಶೇಷ ಉಪನ್ಯಾಸ ನೀಡಿದ ಡಾ. ಗಿರಿಜಾ ಹಸಬಿ, ಬಣಜಿಗರು ತಕ್ಕಡಿಯನ್ನು ನಂಬಿ, ರಟ್ಟೆಯ ಶಕ್ತಿಯನ್ನಾಧರಿಸಿ ನಮ್ಮ ರೊಟ್ಟಿಯನ್ನು ಗಳಿಸಿಕೊಳ್ಳುತ್ತಿದ್ದೇವೆ. ಬಂದವರಿಗೆ ಆತಿಥ್ಯ ನೀಡುವ, ಹಣದ ಮದದಿಂದ ಮೆರೆಯದೆ ಜಗತ್ತಿನಲ್ಲಿ ಸಮಾನತೆಗೆ ಶ್ರಮಿಸುವ ಯಾವುದೇ ಗರ್ವವಿಲ್ಲದ ವ್ಯಕ್ತಿ ಬಣಜಿಗನಾಗಿದ್ದಾನೆ. ನಡೆ-ನುಡಿ ಒಂದಾದ ಶರಣರೇ ನಿಜವಾದ ಬಣಜಿಗರು. ಬಣಜಿಗರು ಶರಣರ ವಂಶಸ್ಥರು. ಇವರಿಗೆ ಗೊತ್ತಿಲ್ಲದ ವಿಷಯವಿಲ್ಲ. ಹೀಗಾಗಿ ಬಣಜಿಗರಲ್ಲಿ ಅನೇಕ ಶರಣರು, ಸಾಧು-ಸಂತರು, ಶಿವಯೋಗಿಗಳು ಆಗಿ ಹೋಗಿದ್ದಾರೆ ಎಂದು ನುಡಿದರು.

ಅಧ್ಯಕ್ಷತೆ ವಹಿಸಿದ್ದ ನರೇಗಲ್ಲ ಬಣಜಿಗ ಸಂಘದ ಅಧ್ಯಕ್ಷ ಗುರುಪಾದಪ್ಪ ಬೆಲ್ಲದ, ಮುಖಂಡ ವೀರಣ್ಣ ಶೆಟ್ಟರ ಮಾತನಾಡಿದರು. ವೇದಿಕೆಯ ಮೇಲೆ ಸಿ.ವಿ. ವಂಕಲಕುಂಟಿ, ರೋಣ ಅಧ್ಯಕ್ಷ ಮುತ್ತಣ್ಣ ಸಂಗಳದ, ಗದಗ ಅಧ್ಯಕ್ಷ ನಾಗೇಶ ಸವಡಿ, ಗಜೇಂದ್ರಗಡ ಅಧ್ಯಕ್ಷ ಎಸ್.ಎಸ್. ವಾಲಿ ಮುಂತಾದವರಿದ್ದರು.

ಸಮಾರಂಭದಲ್ಲಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು, ನಿವೃತ್ತ ನೌಕರರನ್ನು, ದಾನಿಗಳನ್ನು ಸನ್ಮಾನಿಸಲಾಯಿತು. ಶ್ರಾವಣ ಮಾಸದ ನಿಮಿತ್ತ ಸಮಾರಂಭದಲ್ಲಿ ಪಾಲ್ಗೊಂಡ ಮಹಿಳೆಯರಿಗೆ ಉಡಿ ತುಂಬುವ ಕಾರ್ಯವೂ ಜರುಗಿತು.

ಸಂಘದ ಪ್ರಧಾನ ಕಾರ್ಯದರ್ಶಿ ಶಿವಯೋಗಿ ಜಕ್ಕಲಿ ನಿರೂಪಿಸಿದರು. ಕಲಾವಿದ ವಿಜಯಕುಮಾರ ಅಂಗಡಿ ಸ್ವಾಗತಿಸಿದರು. ಮೇಘಾ ವಂಕಲಕುಂಟಿ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಶಿಕ್ಷಕ ಬಸಪ್ಪ ಸಂಗಳದ ಪ್ರಾಸ್ತಾವಿಕವಾಗಿ ಮಾತನಾಡಿದರು.

ಬಣಜಿಗರ ಮೂಲ ಕಸುಬು ವ್ಯಾಪಾರ. ಈ ವ್ಯಾಪಾರವನ್ನು ಶ್ರದ್ಧೆಯಿಂದ, ಪ್ರಾಮಾಣಿಕತೆಯಿಂದ ಮಾಡುತ್ತ ಮುನ್ನಡೆಯೋಣ. ಇದರಿಂದ ಖಂಡಿತ ನಮ್ಮ ಸಮಾಜಕ್ಕೆ ಒಳಿತಾಗುತ್ತದೆ. ಇದಕ್ಕೆ ಬೆನ್ನೆಲುಬಾಗಿ ನಾವು ಆಚರಿಸುವ ಪಂಚಾಚಾರಗಳು ಸಹಾಯ ಮಾಡುತ್ತವೆ. ಆದ್ದರಿಂದ ಎಲ್ಲರೂ ಪಂಚಾಚಾರವನ್ನು ಪಾಲಿಸುತ್ತ, ಲಿಂಗಾಂಗ ಸಾಮರಸ್ಯವನ್ನು ಪಡೆಯುತ್ತ ಸಮಾಜದಲ್ಲಿ ಎಂದಿಗೂ ನೆಮ್ಮದಿ ನೆಲೆಸುವಂತೆ ಮಾಡುವುದು ಮತ್ತು ಉತ್ತಮ ಶಿಕ್ಷಣ ಪಡೆಯುವುದು ಇಂದಿನ ಅವಶ್ಯಕತೆಗಳಲ್ಲಿ ಒಂದಾಗಿದೆ ಎಂದು ಡಾ. ನಾಶಿ ಹೇಳಿದರು.

## ಶೀಘ್ರದಲ್ಲೇ ಗಂಗಾಮತಸ್ಥ ಸಂಘದ ಚುನಾವಣೆ

■ವಿಜಯಸಾಕ್ಷಿ ಸುದ್ದಿ, ಗದಗ



ಅಂಬಿಗೇರ, ಸುಣಗಾರ, ಬಾರಕೇರ, ಗಂಗಾಮತಸ್ಥ 39 ಪರ್ಯಾಯ ಪದ ಹೊಂದಿದ ಕರ್ನಾಟಕ ರಾಜ್ಯ ಗಂಗಾಮತಸ್ಥ ಸಂಘದ ಚುನಾವಣೆ ಶೀಘ್ರದಲ್ಲೇ ಜರುಗುವುದು ಎಂದು ಗದಗ ಜಿಲ್ಲಾ ಅಂಬಿಗರ ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಸಂಘವು ತನ್ನದೇ ಆದ ಇತಿಹಾಸ ಹೊಂದಿದೆ. ಹಲವಾರು ಅಧ್ಯಕ್ಷರ ಆಡಳಿತ ಕಂಡಿದೆ, ಹಳೆಯ ಆಡಳಿತ ಮಂಡಳಿಯ ಅವಧಿ ಮುಗಿದ ಕಾರಣ ಹೊಸ ಆಡಳಿತ ಮಂಡಳಿಯ ಚುನಾವಣೆ ಶೀಘ್ರದಲ್ಲೇ ಜರುಗುವುದು. ಈ ಚುನಾವಣೆಯಲ್ಲಿ ಸಮುದಾಯದ ಬಡ ಕುಟುಂಬಗಳ ಬದುಕು ಸುಧಾರಣೆಗಾಗಿ ಶ್ರಮವಹಿಸುವ ಸಮಾಜ ಸುಧಾರಕರನ್ನು ಆಯ್ಕೆ ಮಾಡಿ ಎಂದು ಅವರು ವಿನಂತಿಸಿದ್ದಾರೆ.

## ಶಾಲಾಭಿವೃದ್ಧಿ ಕಾಮಗಾರಿಗಳಿಗೆ ಒತ್ತು ನೀಡಿ

▶▶ಮೊದಲನೇ ಪುಟದಿಂದ

ಗ್ರಾ.ಪಂ ವ್ಯಾಪ್ತಿಯಲ್ಲಿರುವ ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ ಮನೆ ಮನೆ ಸರ್ವೆ ಮಾಡಿ ಕೂಡಲೇ ಪ್ರಗತಿ ಸಾಧಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸ್ವಚ್ಛ ಭಾರತ್ ಮಿಷನ್ ಪಂಚತಂತ್ರ-2ನಲ್ಲಿ ಆರೋಹಣ ವೈಯಕ್ತಿಕ ಫಲಾನುಭವಿಗಳಿಗೆ ನೀಡಿದ ಕಾರ್ಯಾದೇಶ, ಬಿಲ್ ಪಾವತಿ ಹಾಗೂ ಕಾಮಗಾರಿ ಜಿಯೋ ಟ್ಯಾಗ್ ಕುರಿತು ಪಂಚತಂತ್ರ-2ನಲ್ಲಿ ಮಾಹಿತಿ ಆರೋಹಿಸಲು ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ಕೂಡಲೇ ಕ್ರಮವಹಿಸಬೇಕು.

ಗ್ರಾ.ಪಂಗಳಲ್ಲಿ ಮನೆ-ಮನೆಗಳಿಂದ ತ್ಯಾಜ್ಯ ಸಂಗ್ರಹಣೆ ಪ್ರಕ್ರಿಯೆ ಪರಿಣಾಮಕಾರಿಯಾಗಿ ಚಾಲ್ತಿ ಆಗಬೇಕು. ಘನತ್ಯಾಜ್ಯ ವಿಲೇವಾರಿ ಸರಿಯಾಗಿ ಆಗುವಂತೆ ಅಧಿಕಾರಿಗಳು ಹೆಚ್ಚಿನ ಗಮನಹರಿಸಬೇಕು ಮತ್ತು ಜಿಲ್ಲೆಯಲ್ಲಿ ಈಗಾಗಲೇ 51 ಸಮುದಾಯ ಶೌಚಾಲಯಗಳನ್ನು ಅನುಷ್ಠಾನಿಸಲು ಅನುಮೋದನೆ ನೀಡಲಾಗಿದ್ದು, ಸದರಿ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಸೂಚಿಸಿದರು.

ಜಿಲ್ಲೆಯಲ್ಲಿ ಕಳೆದೆರಡು ವರ್ಷಗಳಿಂದ ಮುಕ್ತಾಯಗೊಳಿಸದೇ ಬಾಕಿ ಉಳಿದಿರುವ ಕಾಮಗಾರಿ ಸೇರಿದಂತೆ ಎಲ್ಲಾ ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸುವುದರ ಬಗ್ಗೆ ಹೆಚ್ಚಿನ ಗಮನಹರಿಸಲು ಅವರು ನಿರ್ದೇಶನ ನೀಡಿದರು.

ಸಭೆಯಲ್ಲಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಯೋಜನಾ ನಿರ್ದೇಶಕ ಎಂ.ಬಿ. ಚಳಗೇರಿ, ಮುಖ್ಯ ಯೋಜನಾಧಿಕಾರಿ ನಿರ್ಮಲಾ ಮತ್ತು ಎಲ್ಲಾ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಸಿಬ್ಬಂದಿಗಳು, ಎಲ್ಲಾ ಗ್ರಾ.ಪಂಗಳ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ/ ತಾಲೂಕು ಮಟ್ಟದ ಎಲ್ಲಾ ಯೋಜನೆಗಳ ಸಿಬ್ಬಂದಿಗಳು ಹಾಜರಿದ್ದರು.

## ಚೇತನ್ ಗೌಡಗೆ ರಾಷ್ಟ್ರಮಟ್ಟದ ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಗದಗ



ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆ ವತಿಯಿಂದ ಆಯೋಜಿಸಿದ್ದ 2023-24ರ ರಾಷ್ಟ್ರಮಟ್ಟದ ಚಿಣ್ಣರ ಚಿತ್ರ ಚಿತ್ತಾರ ಸ್ಪರ್ಧೆಯಲ್ಲಿ ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿ ಚೇತನಗೌಡ ಎನ್ ಇವನು ಉತ್ತಮ ಕಲಾ ಪ್ರದರ್ಶನ ನೀಡಿ ರಾಷ್ಟ್ರಮಟ್ಟದ ಪ್ರತಿಭಾ ಪುರಸ್ಕಾರಕ್ಕೆ ಆಯ್ಕೆಯಾಗಿದ್ದಾನೆ.

ಆಗಸ್ಟ್ 17ರಂದು ಧಾರವಾಡದ ಕೃಷಿ ವಿಶ್ವವಿದ್ಯಾಲಯದಲ್ಲಿ ನಡೆಯುವ ಬೃಹತ್ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳಿಂದ ಪ್ರತಿಭಾ ಪುರಸ್ಕಾರ ಹಾಗೂ ನಗದು ಬಹುಮಾನ ಪಡೆಯಲಿದ್ದಾನೆ.


ಸಾಧನೆಗೈದ ವಿದ್ಯಾರ್ಥಿಗೆ ಸಂಸ್ಥೆಯ ಅಧ್ಯಕ್ಷ ಡಿ.ಬಿ. ಹುಯಿಲಗೋಳ, ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಆಡಳಿತ ಅಧಿಕಾರಿ ಡಾ. ಗಂಗೂಬಾಯಿ ಪವಾರ, ನಿರ್ದೇಶಕ ಡಾ. ಪವನ್ ಎಸ್. ಹುಯಿಲಗೋಳ, ಶೈಕ್ಷಣಿಕ ಮಾರ್ಗದರ್ಶಕ ಪ್ರತೀಕ ಎಸ್.ಹುಯಿಲಗೋಳ, ಶಾಲೆಯ ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ, ಶಿಕ್ಷಕ ವೃಂದದವರು, ಸಿಬ್ಬಂದಿ ವರ್ಗದವರು, ಪಾಲಕರು ಹಾಗೂ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿದ್ದಾರೆ.

## ನೂತನ ಮೂರ್ತಿಗಳ ಭವ್ಯ ಮೆರವಣಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಬಸವೇಶ್ವರ ನಗರದ ಶ್ರೀ ವೀರಭದ್ರೇಶ್ವರ ದೇವಸ್ಥಾನದ ನೂತನ ಶ್ರೀ ವೀರಭದ್ರೇಶ್ವರ, ಶ್ರೀ ಭದ್ರಕಾಳಮ್ಮದೇವಿಯ ನೂತನ ಮೂರ್ತಿಗಳ ಮೆರವಣಿಗೆಯು ಮುತ್ತೈದೆಯರ ಪೂರ್ಣಕುಂಭ, ಸಕಲ ವಾದ್ಯವೈಭವದ ಮೆರವಣಿಗೆಯೊಂದಿಗೆ ರವಿವಾರ ಸಂಜೆ ಶ್ರದ್ಧಾಭಕ್ತಿಯಿಂದ ಜರುಗಿತು.

ಗದುಗಿನ ಸೂರ್ಯ ನಗರದ 'ಶಿಲಾ ಶಿಲ್ಪ ಕಲಾ ಶಾಲಾ'ದಲ್ಲಿ ಶಿಲ್ಪ ಕಲಾವಿದರಾದ ರಾಘವೇಂದ್ರಆಚಾರ್ಯ, ನಾಗರಾಜ ಶಿಲ್ಪಿ ಮತ್ತು ಸಹ ಕಲಾವಿದರು ನಿರ್ಮಿಸಿದ ಎರಡೂ ಮೂರ್ತಿಗಳಿಗೆ ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ಪೂಜಾಕೈಂಕರ್ಯ, ಮೂರ್ತಿಯನ್ನು ಅಲಂಕೃತ ವಾಹನದಲ್ಲಿ ಗದಗ



ಒಕ್ಕಲಗೇರಿಯ ರಾಯಚೂಟಿ ವೀರಭದ್ರೇಶ್ವರ ದೇವಸ್ಥಾನದಿಂದ ಪ್ರಮುಖ ರಾಜಬೀದಿಗಳಲ್ಲಿ ಸಂಚರಿಸಿದ ಮೆರವಣಿಗೆಯು ಬಸವೇಶ್ವರ ನಗರದ ವೀರಭದ್ರೇಶ್ವರ ದೇವಸ್ಥಾನಕ್ಕೆ ಆಗಮಿಸಿತು.

ಸಂಜೆ 7 ಗಂಟೆಗೆ ಎರಡೂ ಮೂರ್ತಿಗಳಿಗೆ ಪೂಜೆ ಸಲ್ಲಿಸಿ ಜಲಾಧಿವಾಸ ಮಾಡಲಾಯಿತು. ಆ. 13ರಂದು ಸಂಜೆ 7 ಗಂಟೆಗೆ ಪುಷ್ಪಾಧಿವಾಸ ಕಾರ್ಯಕ್ರಮ ಜರುಗುವದು ಎಂದು ದೇವಸ್ಥಾನದ ಟ್ರಸ್ಟ ಕಮಿಟಿ ತಿಳಿಸಿದೆ.

ವೀರಭದ್ರೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ, ಶ್ರೀ ವೀರಭದ್ರೇಶ್ವರ ಜಾತ್ರಾ ಸಮಿತಿ, ಶ್ರೀ ಶಂಕರಲಿಂಗ ದೇವ ಟ್ರಸ್ಟ್, ವರದಾನೇಶ್ವರಿ ಮಹಿಳಾ ಮಂಡಳದ ಪದಾಧಿಕಾರಿಗಳು, ಯುವಕರು, ಮಹಿಳೆಯರು, ಹಿರಿಯರು ಸಕಲ ಸದ್ಭಕ್ತರು ಪಾಲ್ಗೊಂಡಿದ್ದರು.

## ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮಗಳು

■ವಿಜಯಸಾಕ್ಷಿ ಸುದ್ದಿ, ಗದಗ


ಜಿಲ್ಲಾಡಳಿತದಿಂದ ಸ್ವಾತಂತ್ರ್ಯೋತ್ಸವ ದಿನಾಚರಣೆ ಪ್ರಯುಕ್ತ ಆಗಸ್ಟ್ 15ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ರಾಷ್ಟ್ರ ಧ್ವಜಾರೋಹಣ ನೆರವೇರಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿ.ಪ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ವಿ.ಪ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ ಆಗಮಿಸುವರು.

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ಬೆಂಬಲ ಬೆಲೆಯಲ್ಲಿ ಹೆಸರು ಬೆಳೆ ಖರೀದಿಯಾಗಲಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬೆಂಬಲ ಬೆಲೆಯಲ್ಲಿ ಹೆಸರು ಬೆಳೆಯ ಖರೀದಿ ಪ್ರಕ್ರಿಯೆ ಪ್ರಾರಂಭಿಸಬೇಕೆಂದು ಆಗ್ರಹಿಸಿ ಭಾರತೀಯ ಕಿಸಾನ ಸಂಘದ ತಾಲೂಕಾ ಘಟಕದ ವತಿಯಿಂದ ಸೋಮವಾರ ತಹಸೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾಧ್ಯಕ್ಷ ಎಸ್.ಎಂ. ಪಾಟೀಲ, ಈಗಾಗಲೇ ರೈತರು ಮುಂಗಾರು ಬೆಳೆಯಾದ ಹೆಸರನ್ನು ಒಕ್ಕಲು ಮಾಡಿ ಮಾರಾಟ ಮಾಡಲು ಪ್ರಾರಂಭಿಸಿದ್ದಾರೆ. ಆದರೆ ಸರಕಾರ ಹೆಸರು ಬೆಳೆಗೆ ಬೆಂಬಲ ಬೆಲೆ ಘೋಷಿಸಿ ಹಲವು ದಿನಗಳೇ ಕಳೆದರೂ ರೈತರ ಹೆಸರು ಬೆಳೆಯನ್ನು ಖರೀದಿಸಲು ಹಿಂದೇಟು ಹಾಕುತ್ತಿದೆ. ಈ ಸಂದರ್ಭದಲ್ಲಿ ಶೀಘ್ರದಲ್ಲಿಯೇ ಬೆಂಬಲ ಬೆಲೆಗೆ ರೈತರ ಬೆಳೆಯನ್ನು ಖರೀದಿಸಬೇಕೆಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ನಾಗರಾಜ ಕುಲಕರ್ಣಿ, ರಾಘವೇಂದ್ರ ಬಳ್ಳಾರಿ, ರಮೇಶ ಕೋಳಿವಾಡ, ಆರ್.ಸಿ. ಹೂಗಾರ, ರಾಮನಗೌಡ ಪಾಟೀಲ, ಸಿ.ಬಿ. ಕಲ್ಯಾಣಿ, ಮಂಜಪ್ಪ ವರವಿ, ಚನಬಸಪ್ಪ ವರವಿ, ಪಕ್ಕಣ್ಣಕಬಾಡಿ, ಮೌನೇಶ ಗೌಳಿ, ರಾಜು ಹೂಗಾರ, ಬಾಬುಸಾಬ ಕೊಡ್ಲಿವಾಡ, ಬಸಪ್ಪ ಪ್ಯಾಟಿ, ಬಸವರಾಜ ಬೆಂತೂರ, ಲಕ್ಷ್ಮಣಮರಾಟೆ, ಫಕ್ಕೀರೇಶ ಬಳ್ಳಾರಿ, ಮಹದೇವಪ್ಪ ಕೋಡಿಹಳ್ಳಿ, ದೇವೇಂದ್ರ ಬಡಕಂಡಪ್ಪನವರ, ಅಶೋಕ ಭಾವನೂರ, ಪರಸಪ್ಪ ಕೋಡಿಹಳ್ಳಿ, ಮಾಂತೇಶ ಶ್ಯಾಗೋಟಿ ಮುಂತಾದವರು ಉಪಸ್ಥಿತರಿದ್ದರು.

## ಮಹಿಳೆಯರು ಮೌಢ್ಯದಿಂದ ಹೊರಬನ್ನಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಯರು ಧರ್ಮ, ಸಂಸ್ಕಾರಗಳ ವಿಚಾರದಲ್ಲಿ ನಂಬಿಕೆ ಇಟ್ಟುಕೊಂಡಿದ್ದಾರೆ.

ಆದರೆ ಅವರಿಗೆ ವೈಚಾರಿಕತೆಯ ಪ್ರಜ್ಞೆ ಬರದಂತೆ ಮನುವಾದಿಗಳು ಸಾವಿರಾರು ವರ್ಷಗಳಿಂದ ಈ ದೇಶದ ಇತಿಹಾಸವನ್ನು ತಿರುಚಿ ಬರೆದು ಇಡೀ ನಮ್ಮ ಸಮಾಜವನ್ನೇ ತಮ್ಮ ಸ್ವಾರ್ಥಕಾಗಿ ಬಲಿ ತೆ-ಗೆದುಕೊಂಡಿದ್ದಾರೆ. ಇಂತಹ ಮೌಢ್ಯ ಆಚರಣೆಯನ್ನು ಬಿತ್ತುತ್ತಲೇ ಬಂದಿದ್ದಾರೆ.

ಇಂದಿನ 21ನೇ ಶತಮಾನದಲ್ಲಿ ಮಹಿಳೆಯರು ಮೌಢ್ಯದಿಂದ



ಹೊರಬೇಕು ಎಂದು ಕಳಸಾಪುರ ಬಸವ ಕೇಂದ್ರದ ಮಲ್ಲಿಕಾರ್ಜುನ ಕಂಡಮ್ಮನವರ ಕರೆ ನೀಡಿದರು.

ಅವರು ಮಾನವ ಬಂಧುತ್ವ ವೇದಿಕೆ, ಬಸವ ದಲಿತಪರ ಸಂಘಟನೆ ಮತ್ತು ಬಸವ ಕೇಂದ್ರ ಕಳಸಾಪುರ ಇವರ ಆಶ್ರದಲ್ಲಿ ನಾಗರ ಪಂಚಮಿಯಂದು ಬಡ ಮಕ್ಕಳಿಗೆ ಹಾಲು-ಸಿಹಿ ವಿತರಿಸಿ ಮಾತನಾಡಿದರು.

ಈ ಸಂರ್ಭದಲ್ಲಿ ಕಪ್ಪೋತಗಿರಿ ಫೌಂಡೇಶನ್ ಅಧ್ಯಕ್ಷರಾದ ಚಂದ್ರಕಲಾ ಇಟಗಿಮಠ, ಸಂತೋಷ ಬಣಕಾರ, ಕಿರಣ ಮುಂಡರಗಿ, ಗದಗ ಎಂ.ಬಿ.ವಿ. ಸಂಚಾಲಕ ಬಸವರಾಜ ಈರಣ್ಣವರ ಸೇರಿದಂತೆ ಮಹಿಳಾ ಸಂಘದ ಸದಸ್ಯರು ಪಾಲ್ಗೊಂಡಿದ್ದರು.

## ನಿಧನ ವಾರ್ತೆ



**ಬಸವಣ್ಣಪ್ಪ ಬಾವಿ**

ಗದಗ: ತಾಲೂಕಿನ ಕನಗಿನಹಾಳ ಮೂಲದ, ಬೆಟಗೇರಿ ನಿವಾಸಿಗಳಾದ ನಿವೃತ್ತ ಶಿಕ್ಷಕ ಬಸವಣ್ಣಪ್ಪ ಸೋಮಪ್ಪ ಬಾವಿ ಸೋಮವಾರ (85) ನಿಧನರಾದರು. ಮೃತರು ಓರ್ವ ಪುತ್ರ, ಮೂವರು ಪುತ್ರಿಯರು, ಅಪಾರ ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ತಾಲೂಕಿನ ಕನಗಿನಹಾಳ ಗ್ರಾಮದಲ್ಲಿ ಆ.13ರಂದು ಮಧ್ಯಾಹ್ನ 1 ಗಂಟೆಗೆ ನೆರವೇರಲಿದೆ.

ಶ್ರೀ ಸೋಮನಾಥ ಚಾರಿತ್ರ ಪುರಾಣ ಪ್ರವಚನ ಪ್ರಾರಂಭೋತ್ಸವ


# ಪುರಾಣ ಶ್ರವಣದಿಂದ ನೆಮ್ಮದಿ ಪ್ರಾಪ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರಾವಣದ ಶ್ರೇಷ್ಠ ಕಾಲದಲ್ಲಿ ದೇವಮಾನವರು, ಮಹಾತ್ಮರು, ಶರಣರು, ಸಂತರು, ಪುಣ್ಯ ಪುರುಷರ ಪುರಾಣ ಪ್ರವಚನ ಕೇಳುವುದರಿಂದ ಮನುಷ್ಯನ ದುಃಖ-ದುಮ್ಮಾನ, ಕಷ್ಟ-ಕಾರ್ಪಣ್ಯ, ಪಾಪ-ಕರ್ಮಗಳು ಕಳೆದು ಶಾಂತಿ, ನೆಮ್ಮದಿ, ಪುಣ್ಯ ಪ್ರಾಪ್ತಿಯಾಗುತ್ತದೆ ಮತ್ತು ಸದ್ವಿಚಾರ, ಸದ್ಗುಣಗಳನ್ನು ಹೊಂದಲು ಸಾಧ್ಯವಾಗುತ್ತದೆ ಎಂದು ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಶನಿವಾರ ಪಟ್ಟಣದ ಶ್ರೀ ಸೋಮೇಶ್ವರ ಪುರಾಣ ಸೇವಾ ಸಮಿತಿಯಿಂದ ಹಮ್ಮಿಕೊಂಡಿರುವ ರಾಘವಾಂಕ ವಿರಚಿತ ಶ್ರೀ ಸೋಮನಾಥ ಚಾರಿತ್ರ ಪುರಾಣ ಪ್ರವಚನ ಪ್ರಾರಂಭೋತ್ಸವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬದುಕಿನ ಜಂಜಾಟದ ನಡುವೆ ಧರ್ಮಕಾರ್ಯ, ಸತ್ಸಂಗ, ಪುರಾಣ-ಪುಣ್ಯಕಥೆ ಆಲಿಸುವುದರಿಂದ ಸಾರ್ಥಕ ಬದುಕಿನ ಮಾರ್ಗ ತೆರೆದುಕೊಳ್ಳುತ್ತದೆ. ತಾಂತ್ರಿಕ ಜಮಾನಾದಲ್ಲಿ ಧಾರ್ಮಿಕ ನಂಬಿಕೆ, ಆಚರಣೆ ಮತ್ತು ಸಂಸ್ಕೃತಿ ಮರೆಯುತ್ತಿರುವದು ದುರ್ದೈವದ ಸಂಗತಿ. ನಮ್ಮ ನೆಲದ ಶ್ರೇಷ್ಠತಮವಾದ ಧರ್ಮ,



ಸಂಸ್ಕೃತಿ ಆಚಾರ-ವಿಚಾರಗಳನ್ನು ಉಳಿಸಿಕೊಂಡು ಹೋಗುವ ನಿಟ್ಟಿನಲ್ಲಿ ಪುರಾಣ-ಪಠಣ ಕಾರ್ಯಕ್ರಮಗಳು ಅವಶ್ಯ.

ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವರ ಈ ಭಾಗದ ಭಕ್ತರ ಕಷ್ಟ-ಕಾರ್ಪಣ್ಯ ಕಳೆಯಲು ಪತ್ನಿ(ಪಾರ್ವತಿ) ಸಮೇತನಾಗಿ ಧರೆಗಿಳಿದು ಬಂದಿದ್ದಾನೆ. ಪುಲಿಗೆರೆಯ ನಾಡಿನಲ್ಲಿ ಜನಿಸಿರುವ ನಾವೆಲ್ಲ ಧನ್ಯರು. ಎಲ್ಲರೂ ಶ್ರಾವಣ ಮಾಸದುದ್ದಕ್ಕೂ ನಡೆಯುವ ಸೋಮೇಶ್ವರ ಚರಿತ್ರೆ ಪುರಾಣ ಆಲಿಸಬೇಕು ಎಂದು ಕರೆನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ವರ್ತಕ ವಿಜಯಕುಮಾರ ಮಹಾಂತಶೆಟ್ಟರ ಮಾತನಾಡಿ, ಭಗವಂತನಿಗೆ ತಲೆಬಾಗಿ ಭಕ್ತಿಯಿಂದ ಕೇಳಿದರೆ ಎಲ್ಲವನ್ನೂ ನೀಡುವ ಶ್ರೀ ಸೋಮನಾಥನ ಚರಿತ್ರೆಯನ್ನು ಆಲಿಸುವ ಸೌಭಾಗ್ಯ ನಮ್ಮ ನಿಮ್ಮೆಲ್ಲರಿಗೂ ದೊರಕಿಸಿರುವ ಇಲ್ಲಿನ ಸಮಿತಿಯವರ, ಯುವಕರ ಕಾರ್ಯ ಅಭಿನಂದನಾರ್ಹವಾಗಿದೆ ಎಂದರು.

ಅರ್ಚಕ ಸೋಮಣ್ಣ ಪೂಜಾರ, ಗುರಣ್ಣ ಪಾಟೀಲ ಕುಲಕರ್ಣಿ, ಶೇಖಣ್ಣ ಬಾಳಿಕಾಯಿ, ಸುರೇಶ ರಾಚನಾಯ್ಕರ, ಚನ್ನಪ್ಪ ಜಗಲಿ, ಶಂಕರ ಬಾಳಿಕಾಯಿ, ವಿರೂಪಾಕ್ಷ ಆದಿ, ಸಿದ್ದನಗೌಡ ಬಳ್ಳೊಳ್ಳಿ, ಭರಮಪ್ಪ ಕೊಡ್ಲಿ, ಬಸನಗೌಡ ಪಾಟೀಲ, ಚನ್ನಪ್ಪ ಆದಿ, ಪರಪ್ಪ ಉಮಚಗಿ, ಮಯೂರ ಪಾಟೀಲ, ನಂದೀಶ ಬಂಡಿವಾಡ, ಬಸವರಾಜ ಮೆಣಸಿನಕಾಯಿ, ಸುರೇಶ ಚೌಕನವರ, ಚನ್ನಪ್ಪ ಚಿಂಚಲಿ, ಚಂದ್ರಶೇಖರ ಹೂಗಾರ,ಕಾಶಪ್ಪ ಮುಳಗುಂದ, ಶಿವಪುತ್ರಪ್ಪ ಚಕಲಬ್ಬಿ ಸೇರಿ ಅನೇಕರಿದ್ದರು.

ಜಯಪ್ರಕಾಶ ಹೊಟ್ಟಿ, ಸೋಮಶೇಖರ ಕೆರಿಮನಿ, ನಾಗರಾಜ ಕಳಸಾಪುರ ನಿರ್ವಹಿಸಿದರು. ವಿರುಪಾಕ್ಷಪ್ಪ ಗವಾಯಿಗಳು ಪುರಾಣ ಪಠಣಗೈದರೆ ಎಸ್.ಎಫ್. ಆದಿ ಪುರಾಣ ಪ್ರವಚನ ಮಾಡಿದರು. ಕಳಕಪ್ಪ ಮುದ್ನಾಪುರ ತಬಲಾ ಸಾಥ್ ನೀಡಿದರು.

ಆಗಸ್ಟ್ 10ರಿಂದ ಪ್ರಾರಂಭವಾಗಿರುವ ಪುರಾಣ ಪ್ರವಚನವು ಸೆಪ್ಟೆಂಬರ್ 3ರವರೆಗೆ ನಿತ್ಯ ಸಂಜೆ 7 ಕ್ಕೆ ಜರುಗುವುದು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪುನೀತರಾಗಬೇಕೆಂದು ಸೋಮೇಶ್ವರ ಪುರಾಣ ಸೇವಾ ಸಮಿತಿ ತಿಳಿಸಿದೆ.

# ನಾಳೆ ಹರ್ ಘರ್ ತಿರಂಗಾ ಅಭಿಯಾನ



■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ನಿರ್ದೇಶನದನ್ವಯ ಆಜಾದಿ ಕಾ ಅಮೃತ ಮಹೋತ್ಸವದ ಅಂಗವಾಗಿ ಜಿಲ್ಲೆಯಲ್ಲಿ ಆಗಸ್ಟ್ 14 ರಂದು ಹರ್ ಘರ್ ತಿರಂಗಾ ಅಭಿಯಾನ ಪ್ರಯುಕ್ತ ವಾಕಥಾನ್ ಜರುಗಲಿದೆ. ಆಗಸ್ಟ್ 14 ರಂದು ಜರುಗಲಿರುವ ಈ ತಿರಂಗಾ ಅಭಿಯಾನದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು, ಎನ್.ಸಿ.ಸಿ, ಎನ್.ಎಸ್.ಎಸ್ ಪಡೆ, ಶಾಲಾ ಮಕ್ಕಳು ಪಾಲ್ಗೊಳ್ಳಲಿದ್ದು, ದೇಶಭಕ್ತಿ ಗೀತೆಗಳ ನಿನಾದದೊಂದಿಗೆ ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ತಿರಂಗಾ ಅಭಿಯಾನವು ಪ್ರಾರಂಭವಾಗಿ ನಗರದ ಗಾಂಧೀಜಿ ಸರ್ಕಲ್‌ಗೆ ಬಂದು ತಲುಪುವುದು. ಗಾಂಧೀಜಿ ಸರ್ಕಲ್‌ದಲ್ಲಿ ಸಂವಿಧಾನ ಪೀಠಿಕೆಯನ್ನು ಪಠಿಸುವುದರೊಂದಿಗೆ ತಿರಂಗಾ ಅಭಿಯಾನವು ಮುಕ್ತಾಯಗೊಳ್ಳಲಿದೆ.

ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಅಂದು ಬಿಳಿ ಬಣ್ಣದ ಉಡುಪು ಧರಿಸಿ ಹರ್ ಘರ್ ತಿರಂಗಾ ಅಭಿಯಾನದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಿಕ್ಷಣ ಪ್ರೇಮಿಗಳ, ವಿವಿಧ ಸಂಘಟನೆಗಳ ಪದಾಧಿಕಾರಿಗಳ ಸಭೆಯಲ್ಲಿ ಆರ್.ಎಸ್.ಬುರಡಿ

# ಸರಕಾರಿ ಶಾಲೆಗಳನ್ನು ಉಳಿಸೋಣ



■ವಿಜಯಸಾಕ್ಷಿ ಸುದ್ದಿ, ಗದಗ

ಸಮುದಾಯದ ಶಕ್ತಿ ದೊಡ್ಡದು. ಸರಕಾರಿ ಶಾಲೆಗಳ ಸಬಲೀಕರಣದಲ್ಲಿ ಸಮುದಾಯದ ಭಾಗವಹಿಸುವಿಕೆ ಅತ್ಯಂತ ಮುಖ್ಯವಾಗಿದ್ದು, ಇದರಿಂದ ಶಾಲೆಯ ಉನ್ನತಿಗೆ ಕಾರಣವಾಗುತ್ತದೆ. ಸರಕಾರಿ ಶಾಲೆಗಳು ನಿಮ್ಮ ಶಾಲೆಗಳು. ಬನ್ನಿ, ಸರಕಾರಿ ಶಾಲೆಗಳನ್ನು ಉಳಿಸೋಣ ಎಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್. ಎಸ್. ಬುರಡಿ ಹೇಳಿದರು.

ಅವರು ಸೋಮವಾರ ಗದಗ ರಂಗನವಾಡಿಯ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ಶಿಕ್ಷಣ ಪ್ರೇಮಿಗಳ ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಪಾಲಕರು ಸರಕಾರಿ ಶಾಲೆಗಳನ್ನು ದಾಟಿ ಖಾಸಗಿ ಶಾಲೆಯತ್ತ ಹೋಗುತ್ತಿರುವದು ಕಂಡುಬರುತ್ತಿದೆ. ಸರಕಾರ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಯಶಸ್ವಿ ಅನುಷ್ಠಾನಗೊಳಿಸಿ ಮಕ್ಕಳಿಗೆ ಒದಗಿಸಲಾಗಿದೆ ಎಂದರು.

ಶಾಲೆಯ ಹಳೆಯ ವಿದ್ಯಾರ್ಥಿ ವೆಂಕಟೇಶ ಗುಡಿ ಮಾತನಾಡಿ, ನಾವು ಕಲಿತ ಶಾಲೆ ನಮ್ಮ ಹೆಮ್ಮೆ. ಹೀಗಾಗಿ ವಿದ್ಯಾರ್ಥಿಗಳಿಗೆ ನಾವು ಕೈಲಾದಷ್ಟು ಸಹಾಯ ಮಾಡಬೇಕಿದೆ ಎಂದರು. ಬಿಆರ್‌ಪಿ ಪ್ರಕಾಶ ಮಂಗಳೂರು ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘ-ಸಂಸ್ಥೆಗಳು ತಮ್ಮ ಸಂಘದ ಇತಿಮಿತಿಯಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಸರಕಾರಿ ಶಾಲೆಗಳಲ್ಲಿ ಒದಗಿಸಿದಲ್ಲಿ ಶಾಲೆಗಳು ಇನ್ನಷ್ಟು ಆಕರ್ಷಕವಾಗುವವು ಎಂದರು.

ಕಾರ್ಯಕ್ರಮದಲ್ಲಿ ಶಾಲಾ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು, ಇನ್ನರ್‌ವ್ಹೀಲ್ ಕ್ಲಬ್ ಮಿಡ್‌ಟೌನ್, ಸಖೀ ಸಹೇಲಿ, ಜೇಂಟ್ಸ್ ಗ್ರುಫ್, ಕದಳಿಶ್ರೀ ವೇದಿಕೆ, ಲೇಖಕಿಯರ ಸಂಘ, ಕಾರ್ಮಿಕ ಕಲ್ಯಾಣ ಸಂಸ್ಥೆ, ಅಲುಮಿನಿಯಂ ಕಾರ್ಮಿಕ ಸಂಘ ಹಾಗೂ ನಿವೃತ್ತ ಶಿಕ್ಷಕರು, ವ್ಯಾಪಾರಿಗಳು, ಮುಖ್ಯೋಪಾಧ್ಯಾಯರು ಭಾಗವಹಿಸಿದ್ದರು.

ಪ್ರಾರಂಭದಲ್ಲಿ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಸ್ವಾಗತಿಸಿದರು. ಶಿಲ್ಪಾ ಹಳ್ಳಿಕೇರಿ ನಿರೂಪಿಸಿದರು. ತನು ಹೂಗಾರ ಪರಿಚಯಿಸಿದರು ಮುಖ್ಯೋಪಾಧ್ಯಾಯೆ ಭಾರತಿ ಕುಲಕರ್ಣಿ ವಂದಿಸಿದರು.

# ಒಳ ಮೀಸಲಾತಿ ಅನುಷ್ಠಾನಕ್ಕೆ ಡಿಎಸ್‌ಎಸ್ ಮನವಿ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪರಿಶಿಷ್ಟ ಜಾತಿಯ ಒಳ ಮೀಸಲಾತಿಯನ್ನು ಕೂಡಲೇ ಅನುಷ್ಠಾನಗೊಳಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಸ್ಥಳೀಯ ಪ.ಪಂ ಮುಖ್ಯಾಧಿಕಾರಿ ಮುಂಜುನಾಥ ಗುಳೇದ ಅವರ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಡಿಎಸ್‌ಎಸ್ ಸಂಚಾಲಕ ರಮೇಶ ಮ್ಯಾಗೇರಿ ಮಾತನಾಡಿ, ಇತ್ತೀಚೆಗೆ ಸುಪ್ರೀಂ ಕೋರ್ಟ್‌ನ ಏಳು ಸದಸ್ಯರ ಸಾಂವಿಧಾನಿಕ ಪೀಠವು ಒಳ ಮೀಸಲಾತಿ ಪರವಾಗಿ ತೀರ್ಪು ನೀಡಿದ್ದು ಅವಿಸ್ಮರಣೀಯ. ರಾಜ್ಯ ಸರಕಾರ ತ್ವರಿತವಾಗಿ ಒಳ ಮೀಸಲಾತಿ ಅನುಷ್ಠಾನ ಮಾಡಬೇಕು ಎಂದು ಆಗ್ರಹಿಸಿದರು.

ಮುಖಂಡರಾದ ಡಿ.ಎಂ. ನಿಂಗಪ್ಪನವರ, ಮಲ್ಲಪ್ಪ ಸಣ್ಣತಮ್ಮನವರ, ಮಾಹಾಂತೇಶ ಮ್ಯಾಗೇರಿ, ಪಿ.ಎಂ. ದೊಡ್ಡಮನಿ, ಸುಭಾಷ ದೊಡ್ಡಮನಿ ಹಾಗೂ ಡಿಎಸ್‌ಎಸ್ ಸಂಘದ ಸರ್ವ ಸದಸ್ಯರು ಇದ್ದರು.



ಗದುಗಿನ ಶಿಕ್ಷಕ ಸಮುದಾಯದ ಸಂಘಟಕರು, ನಿವೃತ್ತ ಪ್ರಧಾನ ಶಿಕ್ಷಕರು ಹಾಗೂ ಕೇಂದ್ರ ಸರಕಾರದ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರೂ ಆದ ಎಸ್.ಎನ್. ಬಳ್ಳಾರಿ ಅವರ ಜನ್ಮದಿನಾಚರಣೆ ಹಿನ್ನೆಲೆಯಲ್ಲಿ ದಲಿತ ಮುಖಂಡರಾದ ಸತೀಶ ಹೂಲಿ, ಆರ್.ಎಲ್. ಮೇಳಣ್ಣವರ, ಬೂದಪ್ಪ ಹುಣಶೀಮರದ, ರಾಮಣ್ಣ ರಾಂಪೂರ, ಪ್ರತೀಕ ಮೇಳಣ್ಣವರ, ಮಂಜುನಾಥ ಹಣಗಿ ಸೇರಿದಂತೆ ಹಲವರ ನಿಯೋಗವು ಅವರ ನಿವಾಸದಲ್ಲಿ ಸನ್ಮಾನಿಸಿ, ಗೌರವಿಸಿ, ಅಭಿನಂದಿಸಿತು.

### ಗದಗ ಜಿಲ್ಲಾ ಶಾಮಿಯಾನ ಸಪ್ಲಾಯರ್ಸ್ ಸಂಘದ ಅಧ್ಯಕ್ಷ ಎನ್. ರಾಮಾರಾವ್ ಮಾಹಿತಿ

# ಕೃತಪುರ ಉತ್ಸವ, ಅಧಿವೇಶನ ಆ.17ರಿಂದ

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಶಾಮಿಯಾನ ಸಪ್ಲಾಯರ್ಸ್, ಲೈಟಿಂಗ್, ಧ್ವನಿವರ್ಧಕ ಹಾಗೂ ಡೆಕೋರೇಶನ್ ಮಾಲೀಕರ ಕ್ಷೇಮಾಭಿವೃದ್ಧಿ ಸಂಘ, ಆಲ್ ಇಂಡಿಯಾ ಟೆಂಟ್ ಡೀಲರ್ಸ್ ವೆಲ್‌ಫೇರ್ ಆರ್ಗನೈಸೇಶನ್ ನವದೆಹಲಿ ಸಹಯೋಗದಲ್ಲಿ ಕೃತಪುರ ಉತ್ಸವ, 3ನೇ ಮಹಾ ಅಧಿವೇಶನ ಆಗಸ್ಟ್ 17 ಮತ್ತು 18ರಂದು ನಡೆಯಲಿದೆ ಎಂದು ಗದಗ ಜಿಲ್ಲಾ ಶಾಮಿಯಾನ ಸಪ್ಲಾಯರ್ಸ್ ಸಂಘದ ಅಧ್ಯಕ್ಷ ಎನ್. ರಾಮಾರಾವ್ ಹೇಳಿದರು.

ಸೋಮವಾರ ಇಲ್ಲಿನ ಕೆ.ಎಚ್. ಪಾಟೀಲ ಸಭಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಮಿಯಾನ್ ಉದ್ಯೋಗದಲ್ಲಿ ನಿರತರಾದ ಮಾಲೀಕರು, ಕಾರ್ಮಿಕರಿಗಾಗಿ ಈ ಮಹಾ ಅಧಿವೇಶನ ಆಯೋಜಿಸಲಾಗಿದೆ. ಈ ಅಧಿವೇಶನಕ್ಕೆ ಬೇರೆ ಬೇರೆ ರಾಜ್ಯಗಳಿಂದಲೂ ಸಂಘಟನೆಯ ಪದಾಧಿಕಾರಿಗಳು, ಸದಸ್ಯರು ಆಗಮಿಸಲಿದ್ದಾರೆ ಎಂದರು.

ಈ ಮಹಾ ಅಧಿವೇಶನದಲ್ಲಿ ಶಾಮಿಯಾನ್ ವೃತ್ತಿಗೆ ಸಂಬಂಧಿಸಿದಂತೆ 80 ಮಳಿಗೆಗಳಲ್ಲಿ ವಸ್ತು ಪ್ರದರ್ಶನ, ಉತ್ಪನ್ನಗಳ ತಯಾರಕರಿಂದ ಪ್ರಾತ್ಯಕ್ಷಿಕೆ ನಡೆಯಲಿದೆ. ಆ. 17ರಂದು ಬೆಳಗ್ಗೆ 9 ಗಂಟೆಗೆ ಎಲ್ಲ ಜಿಲ್ಲೆಗಳ ಅಧ್ಯಕ್ಷರು, ಸರ್ವ ಸದಸ್ಯರಿಂದ ಧ್ವಜಾರೋಹಣ, ಬೆಟಗೇರಿ ಮಾರ್ಕಂಡೇಶ್ವರ ದೇವಸ್ಥಾನದಿಂದ ಕೆ.ಎಚ್. ಪಾಟೀಲ ಸಭಾಂಗಣದವರೆಗೆ ಮೆರವಣಿಗೆ, ರಕ್ತದಾನ ಶಿಬಿರ, ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರ ತುಲಾಭಾರ, ಸಂಜೆ 5 ಗಂಟೆಗೆ ಉದ್ಘಾಟನಾ ಸಮಾರಂಭ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ನೆರವೇರಲಿದೆ ಎಂದರು.

ಆ. 18ರಂದು ಬೆಳಗ್ಗೆ 10 ಗಂಟೆಗೆ ಸಂಘದ ಜಿಲ್ಲಾ, ತಾಲೂಕು ಘಟಕಗಳ ಪದಾಧಿಕಾರಿಗಳ ಜೊತೆ ಚರ್ಚೆ, ವಿಚಾರ ವಿನಿಮಯ, ಉಪನ್ಯಾಸ, ಅಭಿಪ್ರಾಯ ಸಂಗ್ರಹ, ಸಂಜೆ ಸಮಾರೋಪ ಸಮಾರಂಭ ನಡೆಯಲಿದೆ. ಉದ್ಘಾಟನಾ ಸಮಾರಂಭಕ್ಕೆ ಸಚಿವ ಎಚ್.ಕೆ. ಪಾಟೀಲ, ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ ಆಗಮಿಸಲಿದ್ದಾರೆ. ಸಮಾರೋಪ ಸಮಾರಂಭಕ್ಕೆ ಮಾಜಿ ಸಿಎಂ, ಸಂಸದ ಬಸವರಾಜ ಬೊಮ್ಮಾಯಿ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ ಆಗಮಿಸಲಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಶಾಮಿಯಾನ್ ವೃತ್ತಿ ನಿರತರ ಮಕ್ಕಳಿಗೆ ಪ್ರತಿಭಾಪುರಸ್ಕಾರ ನಡೆಯಲಿದೆ. ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕ ಪಡೆದ ಸಂಘಟನೆಯ ಸದಸ್ಯರ ಮಕ್ಕಳಿಗೆ 5 ಸಾವಿರ ರೂ. ನಗದು ಪುರಸ್ಕಾರ ನೀಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ಪದಾಧಿಕಾರಿಗಳಾದ ಅಮರೇಶ ಹಿರೇಮಠ, ಕೆ. ನರಸಿಂಹಮೂರ್ತಿ, ಚನ್ನಬಸವ ಗಸ್ತಿ, ಮೋಹನ ಗಜಕೋಶ, ರವೀಂದ್ರ ಮೆಣಸಿನಕಾಯಿ, ಸುರೇಶ ಕಲಬುರ್ಗಿ ಹಾಗೂ ಇತರರು ಉಪಸ್ಥಿತರಿದ್ದರು.



ಆಲ್ ಇಂಡಿಯಾ ಟೆಂಟ್ ಡೀಲರ್ಸ್ ವೆಲ್‌ಫೇರ್ ಆರ್ಗನೈಸೇಶನ್ ಉಪಾಧ್ಯಕ್ಷ ಜಿ. ಪೂರ್ಣಚಂದ್ರರಾವ್ ಮಾತನಾಡಿ, ರಾಜ್ಯದಲ್ಲಿ 14 ಸಾವಿರ ಶಾಮಿಯಾನ್ ಸಪ್ಲಾಯರ್‌ಗಳಿದ್ದಾರೆ. ಸುಮಾರು 1.5 ಲಕ್ಷ ಜನ ಕೆಲಸ ಮಾಡುತ್ತಿದ್ದಾರೆ. ಹೀಗಾಗಿ ರಾಜ್ಯ ಸರಕಾರ ಶಾಮಿಯಾನ್ ಸಪ್ಲಾಯರ್ ಕಲ್ಯಾಣಕ್ಕೆ ಕಾರ್ಯಕ್ರಮ ಘೋಷಣೆ ಮಾಡಬೇಕು ಎನ್ನುವ ಹಕ್ಕೊತ್ತಾಯವನ್ನು ಮಹಾ ಅಧಿವೇಶನದ ಮೂಲಕ ಮಾಡುತ್ತೇವೆ ಎಂದರು.

# ನಶಾ ಮುಕ್ತ ಭಾರತ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಎಸ್.ಎಂ. ಭೂಮರಡ್ಡಿ ಪದವಿಪೂರ್ವ ಕಾಲೇಜಿನಲ್ಲಿ ವಿಶೇಷ ಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಸೋಮವಾರ 'ನಶಾ ಮುಕ್ತ ಭಾರತ' ಅಭಿಯಾನ ಯೋಜನೆಯಡಿಯಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಈ ವೇಳೆ ಕಾಲೇಜಿನ ಉಪನ್ಯಾಸಕ ಎ.ಎಸ್. ವಡ್ಡರ ಮಾತನಾಡಿ, ವ್ಯಸನದ ಹಿಡಿತದಿಂದ ಮುಕ್ತ ಸಮಾಜವನ್ನು ನಿರ್ಮಾಣ ಮಾಡುವ ಪ್ರಯತ್ನದ ಭರವಸೆಯ ದಾರಿದೀಪವಾಗಿ ನಿಂತಿರುವ ನಶಾ ಮುಕ್ತ ಭಾರತ ಅಭಿಯಾನವು ಜಾಗೃತಿ ಕಾರ್ಯಕ್ರಮಗಳು, ಸಮಾಲೋಚನೆ ಸೇವೆಗಳು ಹಾಗೂ ಸಾಮರ್ಥ್ಯ ವೃದ್ಧಿಯನ್ನು ಒಳಗೊಂಡಿರುವ ಸಮಗ್ರ ವಿಧಾನವಾಗಿದೆ. ದೇಶದ ಭವಿಷ್ಯವಾಗಿರುವ ಯುವ ಸಮೂಹಕ್ಕೆ ಮಾದಕ ವ್ಯಸನಗಳಿಂದ ದೂರವಿಡಲು ಇಂತಹ ಕಾರ್ಯಕ್ರಮಗಳ ಅಗತ್ಯತೆಯಿದೆ ಎಂದರು.



ಪುರಸಭೆಯ ವಿಶೇಷ ಚೇತನರ ಪುನರ್ವಸತಿ ಕಾರ್ಯಕರ್ತ ವೀರಣ್ಣ ಚಿತ್ತರಗಿ ಮಾತನಾಡಿ, ನಶಾ ಮುಕ್ತ ಭಾರತ ಅಭಿಯಾನವು ನಮ್ಮ ಸಮಾಜದ ವಿವಿಧ ವರ್ಗಗಳಲ್ಲಿ ನುಸುಳಿರುವ ಮಾದಕ ವ್ಯಸನದ ನಿರ್ಣಾಯಕ ಸಮಸ್ಯೆಯನ್ನು ಪರಿಹರಿಸಲು ಪ್ರಯತ್ನಿಸಲಿದೆ. ವ್ಯಸನದೊಂದಿಗೆ ಹಿಡಿತ ಸಾಧಿಸುವ ವ್ಯಕ್ತಿಗಳನ್ನು ಪುನರ್ವಸತಿ ಮಾಡಲು ಮತ್ತು ಮರು ಸಂಘಟಿಸಲು ಪ್ರಾಯೋಗಿಕ ಕ್ರಮಗಳೊಂದಿಗೆ ಜಾಗೃತಿ ಮೂಡಿಸಲು ಶಾಲಾ, ಕಾಲೇಜು, ಸಮುದಾಯಗಳು ಮತ್ತು ಸೇವಾ ಪೂರೈಕೆದಾರರನ್ನು ಗುರಿಯಾಗಿಸಿ ಸಮಗ್ರ ಜಾಲವನ್ನು ರಚಿಸುವ ಗುರಿಯನ್ನು ಹೊಂದಿದ್ದು, ಮಾದಕ ವ್ಯಸನವನ್ನು ಪ್ರಾರಂಭಿಸುವುದನ್ನು ತಡೆಯುತ್ತದೆ ಎಂದರು.

ಉಪನ್ಯಾಸಕ ವಿ.ಎಂ. ಜೂಚನಿ ನಶಾಮುಕ್ತ ಭಾರತ ಅಭಿಯಾನದ ಪ್ರತಿಜ್ಞಾ ವಿಧಿ ಬೋಧಿಸಿದರು. ಎಸ್.ಎಸ್. ವಾಲಿಕಾರ, ಜಿ.ಎಸ್. ಗದಗ, ವಾಯ್.ಆರ್. ಸಕ್ರೋಜಿ, ಬಸಮ್ಮ ಚಿಲಝರಿ ಸೇರಿ ಇತರರು ಇದ್ದರು.

# ಪತ್ರಿಕೆಗಳು ಜಾಗೃತಿ ಮೂಡಿಸುತ್ತಿವೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಗತ್ತಿನ ಮಾಹಿತಿ ಕಣಜವಾಗಿ, ಸಮಾಜದ ಕಣ್ಣಾಗಿ, ಜ್ಞಾನ ದೀವಿಗೆಯಾಗಿ, ಕನ್ನಡವನ್ನು ಉಳಿಸಿ ಬೆಳೆಸುವ ಸಾಧನವಾಗಿರುವ ಕನ್ನಡದ ದಿನ ಪತ್ರಿಕೆಗಳನ್ನು ಎಲ್ಲರೂ ಓದುವ ಮೂಲಕ ಪತ್ರಿಕಾ ರಂಗಕ್ಕೆ ಶಕ್ತಿ ತುಂಬುವ ಜವಾಬ್ದಾರಿ ಎಲ್ಲರದ್ದಾಗಿದೆ ಎಂದು ಸಿಪಿಐ ನಾಗರಾಜ ಮಾಡಳ್ಳಿ ಹೇಳಿದರು.

ಅವರು ಸೋಮವಾರ ಪಟ್ಟಣದ ತಾಲೂಕಾ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರತಿಕಾ ದಿನಾಚರಣೆ ಮತ್ತು ಸನ್ಮಾನ ಸಮಾರಂಭದಲ್ಲಿ ಮಾತನಾಡಿ, ಟಿವಿ, ಮೊಬೈಲ್, ಕಂಪ್ಯೂಟರ್ ಸೇರಿ ತಾಂತ್ರಿಕ ಮಾಧ್ಯಮದ ಪ್ರಭಾವದ ನಡುವೆಯೂ ದಿನ ಪತ್ರಿಕೆಗಳು ಜನರ ನಂಬಿಕೆ, ವಿಶ್ವಾಸಕ್ಕೆ ಪಾತ್ರವಾಗಿವೆ. ಸಮಾಜದಲ್ಲಿ ಧರ್ಮ, ಸಂಸ್ಕೃತಿ, ಸಂಪ್ರದಾಯ, ಆಚಾರ-ವಿಚಾರ, ದೇಶ, ಭಾಷೆಯ ಬಗೆಗಿನ ಅರಿವನ್ನು ಸದಾ ಜಾಗೃತಗೊಳಿಸುವ ಕಾರ್ಯವನ್ನು ಪತ್ರಿಕೆಗಳು ಮಾಡುತ್ತವೆ. ರೈತರ, ಜನಸಾಮಾನ್ಯರ ಬದುಕು-ಬವಣೆಯ ಮೇಲೆ ಬೆಳಕು ಚೆಲ್ಲುವ ಒಟ್ಟಿನಲ್ಲಿ ಸಮಾಜದ ಪ್ರತಿಬಿಂಬವಾಗಿ ಪತ್ರಿಕೆಗಳು ಕಾರ್ಯ ನಿರ್ವಹಿಸುತ್ತವೆ ಎಂದರು.




ತಾಲೂಕಾ ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ ಮಾತನಾಡಿ, ಸಮಾಜದಲ್ಲಿ ಮೌಲ್ಯನಿಷ್ಠ, ಸ್ವಾಸ್ಥ್ಯ, ಶಾಂತಿ, ಸುವ್ಯವಸ್ಥೆ ಕಾಪಾಡುವ ಮತ್ತು ಪ್ರಸ್ತುತ ಸ್ಪರ್ಧಾತ್ಮಕ ಯುಗಕ್ಕೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕವಾಗುವ ಪತ್ರಿಕೆಗಳ ಸಂಖ್ಯೆ ಹೆಚ್ಚಬೇಕು. ಪಾಲಕರು ಮಕ್ಕಳಲ್ಲಿ ಪತ್ರಿಕೆ ಓದುವ ಹವ್ಯಾಸ ಬೆಳೆಸಬೇಕು. ಪತ್ರಿಕಾ ಕ್ಷೇತ್ರವನ್ನು ಎಲ್ಲರೂ ಗೌರವದಿಂದ ಕಾಣಬೇಕು ಎಂದರು.

ಸನ್ಮಾನ ಸ್ವೀಕರಿಸಿದ ಸಾಹಿತಿ ಪೂರ್ಣಾಜಿ ಖರಾಟೆ, ನಿವೃತ್ತ ಹಿರಿಯ ತೋಟಗಾರಿಕೆ ಸಹಾಯಕ ನಿರ್ದೇಶಕ ಸುರೇಶ ಕುಂಬಾರ ಮಾತನಾಡಿ, ಇಂದು ಪತ್ರಿಕಾರಂಗ ಸಾಕಷ್ಟು ಸವಾಲುಗಳನ್ನು ಎದುರಿಸುತ್ತಿದ್ದರೂ ಅತ್ಯಂತ ಕಡಿಮೆ ಬೆಲೆಗೆ ಓದುಗರ ಮನೆ ಬಾಗಿಲಿಗೆ ಪತ್ರಿಕೆ ತಲುಪುವ ವ್ಯವಸ್ಥೆ ಮಾಡುತ್ತಿದ್ದು, ಎಲ್ಲರೂ ಪತ್ರಿಕೆ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದರು.

ಹಿರಿಯರಾದ ಚಂಬಣ್ಣ ಬಾಳಿಕಾಯಿ, ವಕೀಲರಾದ ಬಸವರಾಜ ಬಾಳೇಶ್ವರಮಠ ಮಾತನಾಡಿದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪೂರ್ಣಾಜಿ ಖರಾಟೆ, ಸುರೇಶ ಕುಂಬಾರ, ವೀರಣ್ಣ ಪವಾಡದ, ಡಾ. ಶ್ರೀಕಾಂತ ಕಾಟೇವಾಲೆ, ಮಾಳಿಂಗರಾಯ ಪೂಜಾರ ಅವರನ್ನು ಸನ್ಮಾನಿಸಲಾಯಿತು.

ಈ ವೇಳೆ ಪ್ರವೀಣ ಬಾಳಿಕಾಯಿ, ಪದ್ಮರಾಜ ಪಾಟೀಲ, ಬಿ.ಎಂ. ಕುಂಬಾರ, ಗಂಗಾಧರ ಮೆಣಸಿನಕಾಯಿ, ಶರಣು ಗೋಡಿ, ಎನ್.ಆರ್. ಸಾತಪುತೆ, ಪುಲಕೇಶ ಬಟ್ಟೂರ, ಅಂಬರೇಶ ತೆಂಬದಮನಿ, ಸೋಮಪ್ಪ ಯತ್ತಿನಹಳ್ಳಿ, ಸುರೇಶ ಲಮಾಣಿ, ಶಿವಲಿಂಗಯ್ಯ ಹೊತ್ತಗಿಮಠ ಸೇರಿ ತಾಲೂಕು ಪತ್ರಕರ್ತರು ಪಾಲ್ಗೊಂಡಿದ್ದರು. ತಾಲೂಕಾ ಕಾನಿಪ ಸಂಘದ ಅಧ್ಯಕ್ಷ ಮಲ್ಲು ಕಳಸಾಪುರ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಪತ್ರಕರ್ತ ರಮೇಶ ನಾಡಿಗೇರ ಪ್ರಾಸ್ತಾವಿಕ ನುಡಿದರು. ನಾಗರಾಜ ಹಣಗಿ, ದಿಗಂಬರ ಪೂಜಾರ, ಅಶೋಕ ಸೊರಟೂರ ನಿರೂಪಿಸಿದರು.

# ಹೇಮರಡ್ಡಿ ಮಲ್ಲಮ್ಮ ತೊಟ್ಟಿಲೋತ್ಸವ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಶಿವಶರಣೆ ಹೇಮರಡ್ಡಿ ಮಲ್ಲಮ್ಮರ ತೊಟ್ಟಿಲೋತ್ಸವ ಕಾರ್ಯಕ್ರಮವು ಗದಗ ನಗರದ ಒಕ್ಕಲಗೇರಿ ಓಣಿ, ಶ್ರೀ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಸಂಭ್ರಮದಿಂದ ನೆರವೇರಿತು.

ಶ್ರಾವಣ ಮಾಸದ ಅಂಗವಾಗಿ ಒಂದು ತಿಂಗಳವರೆಗೆ ನಡೆಯುತ್ತಿರುವ ಹೇಮರಡ್ಡಿ ಮಲ್ಲಮ್ಮ ಪ್ರವಚನ ಕಾರ್ಯಕ್ರಮದಲ್ಲಿ ಪ್ರವಚನಕಾರರಾದ ಶ್ರೀ ಹೇಮರಾಜ ಶಾಸ್ತ್ರಿಗಳು ಮಾತನಾಡಿ, ಹೇಮರಡ್ಡಿ ಮಲ್ಲಮ್ಮಳ ತಂದೆ-ತಾಯಿಗಳು ಶ್ರೀ ಶೈಲ ಮಲ್ಲಿಕಾರ್ಜುನನ ಪರಮ ಭಕ್ತರಾಗಿದ್ದರು. ಮಲ್ಲಮ್ಮರ ತಾಯಿಯು ಗರ್ಭವತಿಯಿದ್ದಾಗ ಶ್ರೀಶೈಲಕ್ಕೆ ಹೋಗಿ ಮಲ್ಲಿಕಾರ್ಜುನನ ಸನ್ನಿಧಿಗೆ ಭೇಟಿ ನೀಡಿ ಮಲ್ಲಿಕಾರ್ಜುನನ ಆಶೀರ್ವಾದದಿಂದ ಮಲ್ಲಮ್ಮಳ ಜನನವಾಯಿತು. ಅವರ ಮನೆಯಲ್ಲಿ ನಿತ್ಯ ಜಂಗಮ ದಾಸೋಹ ನಡೆಯುತ್ತಿತ್ತು. ಒಳ್ಳೆಯ ವಿಚಾರಗಳನ್ನು ಅವರು ಜೀವನದಲ್ಲಿ ಅಳವಡಿಸಿಕೊಂಡಿದ್ದರು. ಪ್ರತಿಯೊಬ್ಬರೂ ತಮ್ಮ ಮನಸ್ಸನ್ನು ಒಳ್ಳೆಯದರ ಕಡೆಗೆ ತೆಗೆದುಕೊಂಡು ಹೋಗಬೇಕು. ನಮ್ಮ ಮನಸ್ಸಿನಲ್ಲಿರುವ ಕಾಮ-ಕ್ರೋಧಗಳನ್ನು ದೂರವಿಟ್ಟು ನಡೆದುಕೊಂಡರೆ ನಮ್ಮ ಮನಸ್ಸು ಕೂಡಾ ಶಾಂತವಾಗಿರುತ್ತದೆ ಎಂದರು.

ಮಹಿಳಾ ಸತ್ಸಂಗದ ಸದಸ್ಯರಾದ ಸುನಂದಾ ಜೋಬಾಳೆ, ಶೈಲಾ ಮಾನ್ವಿ, ಉಮಾ ಪಟ್ಟಣಶೆಟ್ಟಿ, ಸುಶಿಲಾ ನಿಲುಗಲ್ಲ, ದೀನಾ ಮಾನ್ವಿ, ಅನಸಮ್ಮಾ ಮೇಲಗಿರಿ, ಶಕುಂತಲಾ ಮಾನ್ವಿ, ನೀಲಕ್ಕ ಕಗನಳ್ಳಿ, ಕಸ್ತೂರೆಮ್ಮಾ ಮಾನ್ವಿ, ಜಯಶ್ರೀ ನೀಲುಗಲ್ಲ, ಶಾಂತಮ್ಮಾ ಬಳ್ಳಪ್ಪನವರ, ಶ್ರೀದೇವಿ ಮಾನ್ವಿ, ಸುಮಂಗಲಾ ಗಣಾಚಾರಿಮಠ, ಶರಣಮ್ಮ ಶಿರೂರ, ಈರಮ್ಮಾ ಲಕಬಂಡಿ, ಸುಜಾತಾ ಬಳ್ಳಾರಿ, ಸವಿತಾ ವಸ್ತ್ರದ, ಗಂಗಮ್ಮಾ ಚಿಕ್ಕಪ್ಪನವರ, ಜಯಶ್ರೀ ಪಿಳ್ಳೆ, ಶಾಂತಕ್ಕಾ ಮಾನ್ವಿ, ಸರಸ್ವತಿ ನಂದಿಕೋಲಮಠ, ಅನಸಮ್ಮಾ ಪಾರಮ್ಮಾ, ಮಲ್ಲಮ್ಮಾ ಸೇರಿದಂತೆ ನೂರಾರು ಮಹಿಳೆಯರು ಭಾಗವಹಿಸಿ ತೊಟ್ಟಿಲ ಕಾರ್ಯಕ್ರಮ ನೆರವೇರಿಸಿದರು.



### ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಸಂಚಾಲಕ ರಾಜು ಮೌರ್ಯ ಮಾಹಿತಿ

# ರಾಜ್ಯ ಮಟ್ಟದ ನಾಯಕತ್ವ ಕಾರ್ಯಾಗಾರ ಆ.25ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಹಾಲುಮತ (ಕುರುಬ) ಸಮುದಾಯಕ್ಕೆ ಸಿಗಬೇಕಾದ ಸ್ಥಾನಗಳನ್ನು ಪಡೆಯುವ ಕುರಿತು ಹಾಗೂ ಶೈಕ್ಷಣಿಕವಾಗಿ, ಆರ್ಥಿಕವಾಗಿ ಹಾಗೂ ಸ್ವಯಂ ಉದ್ಯಮಗಳನ್ನು ಪ್ರಾರಂಭಿಸುವ ಬಗ್ಗೆ ಹಾಲುಮತ ಮಹಾಸಭಾ ಹಾಗೂ ಸ್ವಾಭಿಮಾನಿ ಬಳಗದ ವತಿಯಿಂದ ನಗರದ ಪಂ. ಭೀಮಸೇನ ಜೋಶಿ ರಂಗಮಂದಿರದಲ್ಲಿ ಆಗಸ್ಟ್ 25ರ ಬೆಳಿಗ್ಗೆ 10 ಗಂಟೆಯಿಂದ 'ನೀವೂ ನಾಯಕರಾಗಿ' ರಾಜ್ಯ ಮಟ್ಟದ ನಾಯಕತ್ವ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಸಂಚಾಲಕ ರಾಜು ಮೌರ್ಯ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ರಾಜ್ಯದ 31 ಜಿಲ್ಲೆಗಳಲ್ಲಿ ಹರಡಿಕೊಂಡಿರುವ 65 ಲಕ್ಷ ಜನಸಂಖ್ಯೆಯುಳ್ಳ, ಮೂಲತಃ ಬುಡಕಟ್ಟು ಸಂಸ್ಕೃತಿಯನ್ನು ಹೊಂದಿರುವ ಕುರುಬ ಸಮುದಾಯ, ಶೈಕ್ಷಣಿಕವಾಗಿ, ಆರ್ಥಿಕವಾಗಿ, ಔದ್ಯೋಗಿಕವಾಗಿ ಮತ್ತು ರಾಜಕೀಯವಾಗಿ ಹಿಂದುಳಿದಿದೆ.

ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲೂ ಸಹ ಕುರುಬ ಸಮುದಾಯದವರಿಗೆ ನಿರೀಕ್ಷಿತ ಮಟ್ಟದಲ್ಲಿ ಟಿಕೆಟ್ ನೀಡುತ್ತಿಲ್ಲ. ರಾಜ್ಯದ ಜನಸಂಖ್ಯೆಯಲ್ಲಿ ಏಕೈಕ ಅತಿದೊಡ್ಡ ಸಮುದಾಯವಾಗಿದ್ದರೂ ಅವಕಾಶಗಳಿಂದ ವಂಚಿತರಾಗುತ್ತಿರುವುದರ ಬಗ್ಗೆ, ಮುಂಬರುವ ದಿನಗಳಲ್ಲಿ ಸ್ಥಳೀಯ ಚುನಾವಣೆಗಳು, ವಿಧಾನಸಭಾ ಚುನಾವಣೆಗಳಲ್ಲಿ ಸಮುದಾಯಕ್ಕೆ ಸಿಗಬೇಕಾದ ಸ್ಥಾನಗಳನ್ನು ಪಡೆಯುವುದರ ಬಗ್ಗೆ ಪ್ರಸ್ತಾಪ, ಚರ್ಚೆ-ಸಂವಾದಗಳ ನಂತರ ಸಂಕಲ್ಪದೊಂದಿಗೆ ರಾಜ್ಯಾದ್ಯಂತ ಜಾಗೃತಿ ಮತ್ತು ಸಂಘಟನೆಯ ಜವಾಬ್ದಾರಿಗಳ ಬಗ್ಗೆ ಅರಿವು ಮೂಡಿಸಿ, ಸಂವಿಧಾನಬದ್ಧವಾಗಿ ನಮ್ಮ ಹಕ್ಕುಗಳನ್ನು ಪಡೆಯಲು 'ನೀವೂ ನಾಯಕರಾಗಿ' ರಾಜ್ಯಮಟ್ಟದ ನಾಯಕತ್ವ ಕಾರ್ಯಾಗಾರವನ್ನು ಹಾಲುಮತ ಮಹಾಸಭಾ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಹಾಗೂ ಇನ್‌ಸೈಟ್ಸ್ ಐ.ಎ.ಎಸ್ ಅಕಾಡೆಮಿ ಸಂಸ್ಥಾಪಕ, ರಾಜ್ಯ ನಾಯಕ ಜಿ.ಬಿ. ವಿನಯಕುಮಾರ ನೇತೃತ್ವದಲ್ಲಿ ಆ.25ರಂದು ಬೆಳಿಗ್ಗೆ 10ರಿಂದ ಸಂಜೆ 5 ಗಂಟೆಯವರೆಗೆ ಆಯೋಜಿಸಲಾಗಿದೆ. ಈಗಾಗಲೇ ಕಾರ್ಯಾಗಾರದಲ್ಲಿ ಭಾಗವಹಿಸಲು ಈಗಾಗಲೇ 300ಕ್ಕೂ ಹೆಚ್ಚು ಜನರು ಹೆಸರುಗಳನ್ನು ನೋಂದಣಿ ಮಾಡಿಕೊಂಡಿದ್ದು, ಸುಮಾರು 500 ಜನರು ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ಈ ಕಾರ್ಯಾಗಾರದಲ್ಲಿ ಕುರುಬ ಸಮುದಾಯದ ಯುವಕರಿಗೆ ನಾಯಕತ್ವ ಗುಣಗಳನ್ನು ಅಳವಡಿಸಿಕೊಂಡು ನಾಯಕರುಗಳಾಗಿ ರೂಪುಗೊಳಿಸುವಂತಹ ಪ್ರಯತ್ನ ಗದಗ ಜಿಲ್ಲೆಯಿಂದ ಪ್ರಾರಂಭವಾಗಿ, ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲೂ ಕಾರ್ಯಾಗಾರಗಳನ್ನು ಆಯೋಜಿಸಲಾಗುತ್ತಿದೆ ಎಂದು ರಾಜು ಮೌರ್ಯ ಡಾವಣಗೇರಿ ಹೇಳಿದರು.




ರಾಜಕೀಯ ಕ್ಷೇತ್ರದಲ್ಲಿ ಗುರುತಿಸಿಕೊಳ್ಳುವವರಿಗೆ ಅವಕಾಶಗಳು ಸಿಗುತ್ತಿಲ್ಲ. 2023ರ ವಿಧಾನಸಭಾ ಚುನಾವಣೆಯಲ್ಲಿ ಸಮುದಾಯದಿಂದ ರಾಷ್ಟ್ರೀಯ ಪಕ್ಷಗಳಿಂದ ರಾಜ್ಯದ ಕಲಬುರಗಿ, ಯಾದಗಿರಿ, ವಿಜಯಪುರ, ಬಾಗಲಕೋಟೆ, ಗದಗ, ಧಾರವಾಡ, ಹಾವೇರಿ, ದಾವಣಗೆರೆ ಜಿಲ್ಲೆ ಸೇರಿದಂತೆ ದಕ್ಷಿಣ ಕರ್ನಾಟಕ ಭಾಗದಲ್ಲೂ ಟಿಕೆಟ್ ಆಕಾಂಕ್ಷಿಗಳಾಗಿ, ಆಯಾ ಕ್ಷೇತ್ರಗಳಲ್ಲಿ ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದರೂ ಸಹ ಕೊನೆಯ ಸಮಯದಲ್ಲಿ ಟಿಕೆಟ್‌ನಿಂದ ವಂಚಿತರಾದರು ಎಂದು ರಾಜು ಮೌರ್ಯ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಹಾಲುಮತ ಮಹಾಸಭಾದ ಗೌರವಾಧ್ಯಕ್ಷ ನಾಗರಾಜ ಮೆಣಸಗಿ, ಜಿಲ್ಲಾಧ್ಯಕ್ಷ ಬಸವರಾಜ ನೀಲಗಾರ, ಉಪಾಧ್ಯಕ್ಷ ಸೋಮನಗೌಡ ಪಾಟೀಲ, ಮಹಿಳಾ ರಾಜ್ಯ ಸಂಘಟನಾ ಕಾರ್ಯದರ್ಶಿ ಉಮಾ ದ್ಯಾವನೂರ, ಜಿಲ್ಲಾ ಕಾರ್ಯಾಧ್ಯಕ್ಷ ರಾಘು ವಗ್ಗನವರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುತ್ತು ಜಡಿ, ಶಿರಹಟ್ಟಿ ತಾಲೂಕು ಅಧ್ಯಕ್ಷ ಪ್ರಸಾದ ಆಡಿನ, ಮುಂಡರಗಿ ತಾಲೂಕಾಧ್ಯಕ್ಷ ಸುರೇಶ ಹಲವಾಗಲಿ, ಜಿಲ್ಲಾ ಸಂಚಾಲಕ ಕುಮಾರ ಮಾರನಬಸರಿ, ಸತೀಶ್ ಗಿಡ್ಡಹನುಮಣ್ಣನವರ ಮುಂತಾದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka